ಸಂಪುಟ : 9 ಸಂಚಿಕೆ 248 ಪುಟ : 4 ಬೆಲೆ: 3.00 ಮಂಗಳವಾರ ನವೆಂಬರ್ 12 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 248 Pages : 4 Price : 3.00 Tuesday November 12 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ–ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ನವೆಂಬರ್ 12 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 21, 22 – ಶಿಗ್ಗಾವಿ ಲೇಔಟ್, ವಾಲ್ಮೀಕಿ ಭವನ, ಕರುಗಲ್ ಲೇಔಟ್, ಟವರ್ ಕಂಬ, ಕಮತರ ಪ್ಲಾಟ್, ವಿಜಯನಗರ ಶಾಲೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 31, 32 – ರಂಗನವಾಡ, ಜೋಡ ಮಾರುತಿ ಗುಡಿ, ಕಿಲ್ಲಾ, ಗುಜ್ಜರ ಬಸ್ತಿ, ಜಂಡಾ ಕಟ್ಟಿ, ಸುಣಗಾರ ಓಣಿ, ಹಳೆ ಕಚೇರಿ, ಪಿಡ್ಡಿ, ಮೇರವಾಡೆ, ನಾವಳ್ಳಿ, ಬಸಯ್ಯ ಲೈನ್‌ಗಳು, ತ್ರಿಕೋಟೇಶ್ವರ ರಸ್ತೆ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 35 – ಬಾಪೂಜಿ ನಗರ, ವಿಶ್ವೇಶ್ವರಯ್ಯ ನಗರ, 9 ನಂ ಶಾಲೆ. ವಾರ್ಡ್ ನಂ. 28 – ಪಂಚಾಕ್ಷರಿ ನಗರ 6ನೇ ಕ್ರಾಸ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 – ಪೊಲೀಸ್ ಸ್ಟೇಷನ್ ಕೆಳಗಿನ ಭಾಗ, ರಾಜೀವ ಗಾಂಧಿ ನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 – ಮಾನೇದವರ ಲೈನ್, ಅಂಬೇಡ್ಕರ್ ನಗರ, ಸಿದ್ದಲಿಂಗ ನಗರ, ಎಸ್. ಬಿ ನಗರ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎನ್‌ಎಸ್‌ಎಸ್ ಶಿಬಿರ ಉದ್ಘಾಟನೆ ನ.14ಕ್ಕೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಮುಳಗುಂದ ಸಮೀಪದ ಶೀತಾಲಹರಿ ಗ್ರಾಮದಲ್ಲಿ ನ.14ರಿಂದ 20ವರಗೆ ಎನ್‌ಎಸ್‌ಎಸ್ ಶಿಬಿರ ಹಮ್ಮಿಕೊಳ್ಳಲಾಗಿದೆ.

ಕಾನೂನು ಮತ್ತು ಸಂಸದೀಯ ವ್ಯವಹಾರ, ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲ್ ಕಾರ್ಯಕ್ರಮ ಉದ್ಘಾಟಿಸುವರು. ಧಾರವಾಡ ಮುರುಘಾಮಠ ಹಾಗೂ ಮುಳಗುಂದ ಗವಿಮಠದ ಡಾ.ಮಲ್ಲಿಕಾರ್ಜುನ ಮಾಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ, ಮುಖ್ಯ ಅತಿಥಿಗಳಾಗಿ ಪ.ಪಂ ಅಧ್ಯಕ್ಷೆ ಯಲ್ಲವ್ವ ಕವಲೂರ, ಉಪಾಧ್ಯಕ್ಷೆ ಅನುಸೂಯಾ ಸೋಮಗೇರಿ, ಎಸ್.ಎಂ. ನೀಲಗುಂದ, ಡಾ. ಎಸ್.ಸಿ. ಚವಡಿ, ಎಂ.ಎಂ. ಬಡ್ನಿ, ಪಿ.ಎ. ವಂಟಕರ, ಬಿ.ಸಿ. ಬಡ್ನಿ, ಎಂ.ಎಂ. ಅದರಗುಂಚಿ, ಎಸ್.ಸಿ. ಕುರ್ತಕೋಟಿ, ಎಸ್. ಎಫ್. ಅಮೋಘಿಮಠ, ಪ.ಪಂ ಸ್ಥಾಯಿ ಸಮೀತಿ ಅಧ್ಯಕ್ಷ ಇಮ್ಮಣ್ಣಾ ಶೇಖ ಮತ್ತು ಪ.ಪಂ ಸರ್ವ ಸದಸ್ಯರು, ಗ್ರಾಮದ ಮುಖಂಡರು ಭಾಗವಹಿಸುವರು ಎಂದು ಪ್ರಾಚಾರ್ಯ ಎ.ಎಂ. ಅಂಗಡಿ ಪ್ರಕಟಣೆಗೆ ತಿಳಿಸಿದ್ದಾರೆ.

### ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ

# ಓಬವ್ವಳ ಶೌರ್ಯ ಎಲ್ಲರಿಗೂ ಮಾದರಿ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಯ್ನೆಲಕ್ಕಾಗಿ ಶೌರ್ಯದಿಂದ ಹೋರಾಡಿದ ವೀರವನಿತೆ ಒನಕೆ ಓಬವ್ವ ಎಲ್ಲರಿಗೂ ಮಾದರಿಯಾಗಿದ್ದಾರೆ ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸೋಮವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಏರ್ಪಡಿಸಲಾದ ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕರ್ನಾಟಕ ಇತಿಹಾಸವನ್ನು ಗಮನಿಸಿದಾಗ ದೇಶದ ರಕ್ಷಣೆಗಾಗಿ ಅನೇಕ ವೀರ ಮಹಿಳೆಯರು ತಮ್ಮ ಪ್ರಾಣವನ್ನು ಮುಡುಪಾಗಿಟ್ಟಿದ್ದನ್ನು ಸ್ಮರಿಸಬಹುದಾಗಿದೆ. ಅಂತಹ ವೀರ ಮಹಿಳೆಯರ ಸಾಲಿನಲ್ಲಿ ಒನಕೆ ಓಬವ್ವ ವಿರಾಜಮಾನರಾಗಿದ್ದಾರೆ. ಒನಕೆ ಓಬವ್ವ ಅವರ ಸಾಹಸ ಎಲ್ಲರಿಗೂ ಆದರ್ಶಪ್ರಾಯವಾಗಿದೆ ಎಂದು ಅಭಿಪ್ರಾಯಪಟ್ಟರು. ಗದಗ–ಬೆಟಗೇರಿ ನಗರಸಭೆ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ವೀರವನಿತೆ ಓಬವ್ವ ಅವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿದರು.



ಚಿತ್ರದುರ್ಗದ ನಾಯಕರ ಬಳಿ ಕಹಳೆಯವನಾಗಿ ಸೇವೆ ಸಲ್ಲಿಸುತ್ತಿದ್ದ ಮದ್ದಹನುಮಪ್ಪನ ಹೆಂಡತಿಯೇ ಓಬವ್ವ. ಹೈದರ್ ಅಲಿಯು ಚಿತ್ರದುರ್ಗ ಕೋಟೆಯನ್ನು ಅಕ್ರಮಿಸಲು ವಿಫಲನಾದನು. ನಂತರ ಹೈದರ್ ಅಲಿಯು ಕುಟಿಲ ಮಾರ್ಗದಿಂದ ಕೋಟೆಯನ್ನು ಬೇಧಿಸಲು ಗೂಢಚಾರರನ್ನು ನೇಮಿಸಿ ತಯಾರಿ ನಡೆಸಿದರು. ಮದ್ದಹನುಮಪ್ಪನು ಮಧ್ಯಾಹ್ನ ಮನೆಗೆ ಬಂದಾಗ ಓಬವ್ವಳು ಆತನಿಗೆ ಊಟಕ್ಕೆ ಬಡಿಸಿ ಕುಡಿಯುವ ನೀರು ತರಲು ಸಿಹಿ ನೀರಿನ ಕೊಳಕ್ಕೆ ಬಂದಳು. ಕಳ್ಳಗಿಂಡಿಯ ಕಡೆಯಿಂದ ಶತ್ರುಗಳ ಅಸ್ಪಷ್ಟ ಮಾತುಗಳು, ಸುಳಿವು ಸಿಕ್ಕ ತಕ್ಷಣವೇ ಕಳ್ಳಗಿಂಡಿಯ ಬಳಿ ಶತ್ರುಗಳನ್ನು ಎದುರಿಸಲು ಸಿದ್ಧಳಾದರು. ಒನಕೆಯನ್ನು ಹಿಡಿದು ಒಬ್ಬೊಬ್ಬರಾಗಿ ನುಸುಳಿ ಬಂದವರ ತಲೆಗೆ ಒನಕೆ ಪೆಟ್ಟು ಕೊಟ್ಟು ಕೊಂದು ಹಾಕತೊಡಗಿದಳು. ಊಟ ಮುಗಿಸಿದ ಮದ್ದ ಹನುಮಪ್ಪನು ತನಗೆ ಕುಡಿಯುವ ನೀರು ತರಲು ಹೋದ ಓಬವ್ವಳನ್ನು ಕಾಣಲು ಕೊಳದ ಬಳಿಗೆ ಬಂದಾಗ ಅಲ್ಲಿಯ ಸನ್ನಿವೇಶವನ್ನು ನೋಡಿ ತನ್ನ ಕಹಳೆಯನ್ನು ಮೊಳಗಿಸಿದನು. ದುರ್ಗದ ಸೈನಿಕರು ಧಾವಿಸಿ ಬಂದು ಶತ್ರುಗಳನ್ನು ಹೊಡೆದೋಡಿಸಿದರು. ಹೀಗೆ ಶತ್ರುಗಳ ಕುಟಿಲ ಆಕ್ರಮಣವನ್ನು ತಡೆದು ಓಬವ್ವಳು ತನ್ನ ಸಮಯ ಪ್ರಜ್ಞೆ ಹಾಗೂ ಶೌರ್ಯ ಮೆರೆದಿದ್ದು ಎಲ್ಲರಿಗೂ ಆದರ್ಶಪ್ರಾಯವಾಗಿದೆ ಎಂದು ಇತಿಹಾಸ ವಿವರಿಸಿದರು.

ಉಪನ್ಯಾಸಕರಾಗಿ ಆಗಮಿಸಿದ್ದ ಹಂಪಿ ಕನ್ನಡ ವಿಶ್ವವಿದ್ಯಾಲಯದ ಚರಿತ್ರೆ ವಿಭಾಗದ ಪ್ರಾಧ್ಯಾಪಕ ಡಾ. ವಿರೂಪಾಕ್ಷ ಮಾತನಾಡಿ, ಜಗತ್ತಿನಲ್ಲಿ ಮೂಢನಂಬಿಕೆ, ತಾರತಮ್ಯ ಹೋಗಲಾಡಿಸಿ ಸಮಾನತೆಗಾಗಿ ಹಾಗೂ ಅಭಿವೃದ್ಧಿಗಾಗಿ ಅನೇಕ ನೇತಾರರು, ಶರಣರು, ಮುಖಂಡರು ಶ್ರಮಿಸಿದ್ದಾರೆ. ಅದರಿಂದ ಸಾಮಾಜಿಕ, ತಂತ್ರಜ್ಞಾನ, ರಾಜಕೀಯ ಕ್ರಾಂತಿಗಳೂ ಸಹ ನಡೆದಿವೆ ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಉಪವಿಭಾಗಾಧಿಕಾರಿ ಎಂ.ಗಂಗಪ್ಪ, ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತ ಮಹೇಶ ಪೋತದಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮುದಾಯದ ಮುಖಂಡರು, ಗಣ್ಯರು, ಹಾಜರಿದ್ದರು.

ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

### ಗೀತಾ ಪ್ರವಚನ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಚಿವ ಎಚ್.ಕೆ. ಪಾಟೀಲ

# ಪ್ರವಚನ ಬದುಕಿನಲ್ಲಿ ಬದಲಾವಣೆ ತರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಮಾಯಣ, ಮಹಾಭಾರತದಲ್ಲಿನ ಮೌಲ್ಯಗಳ ಪುನರುತ್ಥಾನಕ್ಕೆ ಅಧ್ಯಾತ್ಮಿಕ ಲೋಕದಲ್ಲಿ ದಿಟ್ಟತನ ಬರಬೇಕಾಗಿದೆ ಎಂದು ಕಾನೂನು, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಹೇಳಿದರು.

ಸೋಮವಾರ ಇಲ್ಲಿನ ಶ್ರೀ ಸದಾಶಿವಾನಂದ ಗಾರ್ಡನ್‌ನಲ್ಲಿ ಕುಮಾರವ್ಯಾಸ ಪ್ರವಚನ ಸಂಚಾಲನಾ ಸಮಿತಿ ಹಮ್ಮಿಕೊಂಡಿದ್ದ ಶ್ರೀಮದ್ ಭಗವದ್ಗೀತಾ ಪ್ರವಚನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಗತ್ತಿನಲ್ಲಿ ರಾಮಾಯಣ ಮತ್ತು ಮಹಾಭಾರತ ಧಾರಾವಾಹಿಯನ್ನು ಅತಿಹೆಚ್ಚು ಜನ ನೋಡಿರುವ ದಾಖಲೆಯಿದೆ. ಜಾತಿ, ಧರ್ಮ, ಮತ–ಪಂಥ ಮರೆತು ಎಲ್ಲರೂ ಅವುಗಳನ್ನು ನೋಡಿದ್ದಾರೆ. ಆದರೆ ಅದರ ಪರಿಣಾಮವನ್ನು ಅಳತೆ ಮಾಡಿದಾಗ ನಿರಾಸೆ ಮೂಡಿಸುತ್ತದೆ. ಸದೃಢ ಪ್ರಜಾಪ್ರಭುತ್ವ ಹೊಂದಿರುವ ಭಾರತದಲ್ಲಿ ರಾಮಾಯಣ, ಮಹಾಭಾರತದ ಮಾತುಗಳನ್ನು ಗಾಳಿಗೆ ತೂರಿರುವುದು ವಿಷಾದದ ಸಂಗತಿ ಎಂದರು.



ಕಾರ್ಯಕ್ರಮದ ಸಾನ್ನಿಧ್ಯವನ್ನು ಡಾ. ಪಾವಗಡ ಪ್ರಕಾಶರಾವ್, ನಿರ್ಭಯಾನಂದ ಸರಸ್ವತಿ ಸ್ವಾಮೀಜಿ, ಅಭಿನವ ಶಿವಾನಂದ ಸ್ವಾಮೀಜಿ, ಪುನೀತ್ ಮಹಾರಾಜರು ವಹಿಸಿದ್ದರು. ರೋಣ ಶಾಸಕ ಜಿ.ಎಸ್. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಶಾಸಕ ವೀರಣ್ಣ ಚರಂತಿಮಠ, ಡಿ.ಆರ್. ಪಾಟೀಲ, ನಿವೃತ್ತ ನ್ಯಾಯಾಧೀಶ ಎಸ್. ಕೆ. ಪಲ್ಲೇದ, ಗುರುರಾಜ ಬಳಗಾನೂರ, ಜೆ.ಕೆ. ಜಮಾದಾರ ಉಪಸ್ಥಿತರಿದ್ದರು. ಡಾ. ಎಸ್.ಬಿ. ಶೆಟ್ಟರ್ ಅಧ್ಯಕ್ಷತೆ ವಹಿಸಿದ್ದರು. ಡಾ. ಕಲ್ಲೇಶ ಮೂರಶಿಳ್ಳಿನ ಕಾರ್ಯಕ್ರಮ ನಿರ್ವಹಿಸಿದರು.

ಭಾರತದಲ್ಲಿ ನಡೆಯುವಷ್ಟು ಧಾರ್ಮಿಕ ಕಾರ್ಯಕ್ರಮಗಳು ಬೇರೆ ಯಾವುದೇ ದೇಶದಲ್ಲಿ ನಡೆಯುವುದಿಲ್ಲ. ಆದರೂ ಭಾರತೀಯರ ಬದುಕಿನಲ್ಲಿ ಪರಿಣಾಮ ಬೀರಿಲ್ಲ. ಆದರೆ ಹಲವು ಪ್ರಥಮಗಳಿಗೆ ಸಾಕ್ಷಿಯಾಗಿರುವ ಗದಗ ನೆಲದಲ್ಲಿ ಪಾವಗಡ ಪ್ರಕಾಶರಾವ್ ಅವರ ಪ್ರವಚನ ಜನರ ಬದುಕಿನಲ್ಲಿ ಬದಲಾವಣೆ ತರಲಿ. ಮೌಲ್ಯಗಳ ಪುನರುತ್ಥಾನಗೊಂಡು ಜನರ ಜ್ಞಾನ ಕ್ಷಿತಿಜವನ್ನು ವಿಸ್ತರಿಸಲಿ ಎಂದು ಸಚಿವ ಎಚ್.ಕೆ. ಪಾಟೀಲ ಆಶಿಸಿದರು.

## ಪ್ರಾಮಾಣಿಕತೆಯಿಂದ ಕರ್ತವ್ಯ ನಿರ್ವಹಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶ ಮತ್ತು ಸಮಾಜಕ್ಕಾಗಿ ಸೇವೆ ಸಲ್ಲಿಸುವ ಅಮೂಲ್ಯ ಅವಕಾಶ ಸರ್ಕಾರಿ ನೌಕರರಿಗೆ ದೊರಕಿರುವುದರಿಂದ ಪ್ರತಿಯೊಬ್ಬ ಸರ್ಕಾರಿ ನೌಕರನೂ ಪ್ರಾಮಾಣಿಕವಾಗಿ ಜನರಿಗೆ ಸರ್ಕಾರಿ ಸೌಲಭ್ಯಗಳನ್ನು ನೀಡಬೇಕು. ಯಾವುದೇ ಆಸೆ–ಆಕಾಂಕ್ಷೆಗಳಿಗೂ ಬಲಿಯಾಗದೆ, ಪ್ರಾಮಾಣಿಕತೆ, ನೈತಿಕತೆಯಿಂದ ತಮ್ಮ ಕರ್ತವ್ಯ ನಿರ್ವಹಿಸಬೇಕು ಎಂದು ತಹಸೀಲ್ದಾರ ವಾಸುದೇವ ಸ್ವಾಮಿ ಹೇಳಿದರು.

ಅವರು ಸೋಮವಾರ ಪಟ್ಟಣದ ಪುರಸಭೆ ಕಲಾ ಮಹಾವಿದ್ಯಾಲಯದಲ್ಲಿ ತಾಲೂಕಾಡಳಿತ ಮತ್ತು ವಿವಿಧ ಇಲಾಖೆಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಜಾಗೃತಿ ಅರಿವು ಸಪ್ತಾಹ–2024' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಅಧಿಕಾರಿಗಳು ಮತ್ತು ಸಾರ್ವಜನಿಕರ ಸಹಕಾರದಿಂದ ಮಾತ್ರ ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಿ ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ. ಸರ್ಕಾರದ ಸೌಲಭ್ಯಗಳು ಸಾರ್ವಜನಿಕರಿಗೆ ಅತೀ ಸುಲಭವಾಗಿ ದೊರಕುವ ನಿಟ್ಟಿನಲ್ಲಿ ಎಲ್ಲಾ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ಲಂಚ ಪಡೆಯುವುದು ಮತ್ತು ಲಂಚ ನೀಡುವುದು ಎರಡೂ ಅಪರಾಧವಾಗಿದೆ. ಹಾಗಾಗಿ ಸಾರ್ವಜನಿಕರಿಗೆ ಇದರ ಕುರಿತು ತಿಳಿಹೇಳಬೇಕು ಎಂದರು.

ಕಾರ್ಯಕ್ರಮದಲ್ಲಿ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಉಪನೋಂದಣಿ ಅಧಿಕಾರಿ ಎಸ್. ಕೆ. ಜಲರಡ್ಡಿ, ಎಸ್.ಕೆ. ವಾಲಿ, ಎಎಸ್‌ಐ ಎಂ.ಆರ್. ಮಟ್ಟಿ, ಹೆಸ್ಕಾಂನ ಆಂಜನಪ್ಪ ಸೇರಿ ಹಲವರಿದ್ದರು. ಪ್ರಾಚಾರ್ಯ ಬಿ.ಎಸ್. ಉಗ್ರದ ವಿದ್ಯಾರ್ಥಿಗಳಿಗೆ ಭ್ರಷ್ಟಾಚಾರ ನಿರ್ಮೂಲನೆ ಕುರಿತ ಪ್ರತಿಜ್ಞಾವಿಧಿ ಬೋಧಿಸಿದರು.

### 2019ರ ನಂತರದಲ್ಲಿ ಜಿಲ್ಲೆಯ ಆಸ್ತಿಗಳಲ್ಲಿ ವಕ್ಫ್ ಎಂದು ನಮೂದಿಸಿಲ್ಲ: ಡಿಸಿ ಗೋವಿಂದರೆಡ್ಡಿ

## ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ

■ ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲೆಯಲ್ಲಿರುವ ಆಸ್ತಿಗಳ ಉತಾರದಲ್ಲಿ 2019ರ ನಂತರ ಯಾವುದೇ ಆಸ್ತಿಗಳಲ್ಲಿ ವಕ್ಫ್ ಎಂದು ನಮೂದಾಗಿರುವುದಿಲ್ಲ ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿನ ಆರ್.ಟಿ.ಸಿಗಳಲ್ಲಿ ವಕ್ಫ್ ಎಂದು ನಮೂದಾಗಿರುವ ಕುರಿತಂತೆ ಸ್ಪಷ್ಟನೆ ನೀಡಿರುವ ಅವರು, 1974ರ ಸರ್ಕಾರದ ಗೆಜೆಟ್ ಪ್ರಕಾರ ಜಿಲ್ಲೆಯ ಕೆಲವು ಆರ್.ಟಿ.ಸಿಗಳಲ್ಲಿ 2019ರಲ್ಲಿ ವಕ್ಫ್ ಎಂದು ನೋಂದಣಿಯಾಗಿವೆ. ವಕ್ಫ್ ಎಂದು ನೋಂದಣಿಯಾದ ಹಲವು ಆಸ್ತಿಗಳ ಮಾಲಿಕರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿ ನ್ಯಾಯಾಲಯದ ಆದೇಶ ಮೇರೆಗೆ ಆರ್.ಟಿ.ಸಿಯಲ್ಲಿ ನಮೂದಾಗಿದ್ದ ವಕ್ಫ್ ಎಂಬ ಪದವನ್ನು ಸರಿಪಡಿಸಲಾಗಿದೆ ಎಂದು ತಿಳಿದಿದ್ದಾರೆ.

ಕೋಟುಮುಚಗಿ ಗ್ರಾಮದ ಸೋಮೇಶ್ವರ ದೇವಸ್ಥಾನ ಆಸ್ತಿಯ ಆರ್.ಟಿ.ಸಿಯಲ್ಲಿ ವಕ್ಫ್ ಎಂದು ನಮೂದಾಗಿರುವುದಿಲ್ಲ. ಈ ಕುರಿತು ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

## ತ್ರಿವಿಧ ಜಿಗಿತದಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗದಗ ತಾಲೂಕಿನ ಶಿರುಂಜ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ಆಸೀಫ್ ಎಸ್ ನದಾಫ್ ಕೋಲಾರದಲ್ಲಿ ನಡೆದ ರಾಜ್ಯಮಟ್ಟದ ಅಥ್ಲೆಟಿಕ್ ವಿಭಾಗದ ತ್ರಿವಿಧ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆಯುವ ಮೂಲಕ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಕುಗ್ರಾಮದ ಶಿರುಂಜದ ಪ್ರೌಢಶಾಲೆಯಲ್ಲಿ ದೈಹಿಕ ಶಿಕ್ಷಕರ ಕೊರತೆಯ ನಡುವೆಯೂ ಗ್ರಾಮೀಣ ಭಾಗದ ಬಡ ಪ್ರತಿಭೆಗೆ ಪಿಯುಸಿ ಓದುತ್ತಿರುವ ಆತನ ಸಹೋದರ ದಿವಾನ್‌ಸಾಬನೇ ತರಬೇತುಗೊಳಿಸಿದ್ದಾನೆ. ವಿದ್ಯಾರ್ಥಿಯ ಸಾಧನೆಗೆ ಜಿಲ್ಲಾ ಉಸ್ತುವಾರಿ ಸಚಿವರು, ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ದೈಹಿಕ ಶಿಕ್ಷಣ ಇಲಾಖೆ, ಅಧಿಕಾರಿ ವರ್ಗ, ಶಿಕ್ಷಕ ವೃಂದ, ಎಸ್‌ಡಿಎಂಸಿ, ಗ್ರಾಮಸ್ಥರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

## ಕೋವಿಡ್ ತನಿಖೆ ಕುರಿತು ಹೇಳಿಕೆ; ಪ್ರಲ್ಹಾದ್ ಜೋಶಿ ವಿರುದ್ಧ ಕ್ರಮಕ್ಕೆ ರಾಜ್ಯಪಾಲರಿಗೆ ದೂರು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೊರೋನಾ ಕಾಲದಲ್ಲಿ ಬಿಜೆಪಿ ಸರ್ಕಾರ ನಡೆಸಿದೆ ಎನ್ನಲಾದ ಅವ್ಯವಹಾರಗಳ ಕುರಿತು ತನಿಖೆ ನಡೆಸುತ್ತಿರುವ ಆಯೋಗದ ಮುಖ್ಯಸ್ಥ ನ್ಯಾ. ಮೈಕಲ್ ಡಿ ಕುನ್ಹಾ ಅವರ ಘನತೆಗೆ ಚ್ಯುತಿ ಬರುವ ಹೇಳಿಕೆ ನೀಡಿರುವ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ವಿರುದ್ಧ ಕ್ರಮ ತೆಗೆದುಕೊಳ್ಳವುಂತೆ ರಾಷ್ಟ್ರಪತಿಗಳಿಗೆ ಶಿಫಾರಸು ಮಾಡಬೇಕು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮತ್ತು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಇಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಮನವಿ ಸಲ್ಲಿಸಿದರು.

ನೀವು ನ್ಯಾಯಾಧೀಶರು, ಸರ್ಕಾರದ ಏಜೆಂಟ್ ಅಲ್ಲ" ಎಂದು ನ್ಯಾ. ಡಿ.ಕುನ್ಹಾ ಅವರನ್ನು ಪ್ರಲ್ಹಾದ್ ಜೋಶಿ ಟೀಕಿಸಿದ್ದರು.

ಮುಡಾ ವಿಚಾರದಲ್ಲಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ರದ್ದು ಕೋರಿ ಸಿಎಂ ಸಿದ್ದರಾಮಯ್ಯ ಅವರು ಸಲ್ಲಿಸಿದ್ದ ಅರ್ಜಿ ವಜಾ ಮಾಡಿದ್ದ ಹೈಕೋರ್ಟ್‌ನ ನಡೆಯನ್ನು ರಾಜಕೀಯ ಪ್ರೇರಿತ ಎಂದು ಸಚಿವ ಜಮೀರ್ ಅಹಮದ್ ಖಾನ್ ನೀಡಿದ್ದ ಹೇಳಿಕೆಯ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ನಿನ್ನೆಯಷ್ಟೇ ರಾಜ್ಯಪಾಲರು ಸರ್ಕಾರಕ್ಕೆ ಸೂಚನೆ ನೀಡಿದ್ದಾರೆ. ಆ ಬೆನ್ನಲ್ಲೇ ಇಬ್ಬರು ಸಚಿವರು ರಾಜ್ಯಪಾಲರನ್ನು ಭೇಟಿ ಮಾಡಿದ್ದು, ಜೋಶಿ ವಿರುದ್ಧ ಕ್ರಮಕ್ಕೆ ಆಗ್ರಹಿಸಿದ್ದಾರೆ.

ರಾಜ್ಯಪಾಲರ ಭೇಟಿ ಬಳಿಕ ಮಾತನಾಡಿದ ಸಚಿವ ದಿನೇಶ್ ಗುಂಡೂರಾವ್, "ಪ್ರಲ್ಹಾದ್ ಜೋಶಿ ಹೇಳಿಕೆ ಖಂಡಿಸಿ ಕ್ರಮಕ್ಕೆ ಒತ್ತಾಯಿಸಿ ದೂರು ನೀಡಿದ್ದೇವೆ. ನ್ಯಾಯಾಂಗ ತನಿಖಾ ಆಯೋಗದ ಬಗ್ಗೆ ಹಾಗೂ ನಿವೃತ್ತ ನ್ಯಾಯಾಧೀಶರ ಬಗ್ಗೆ ನಿಂದಿಸಿ ಕೆಟ್ಟದಾಗಿ ಮಾತನಾಡಿದ್ದಾರೆ. ಇದು ಅಹಂಕಾರದ ಪರಮಾವಧಿ" ಎಂದು ಕಿಡಿಕಾರಿದರು. ಮೈಕಲ್ ಡಿ ಕುನ್ಹಾ ನ್ಯಾಯಾಧೀಶರಲ್ಲ, ಬದಲಾಗಿ ರಾಜಕೀಯ ಏಜೆಂಟ್, ವರದಿ ದುರುದ್ದೇಶದಿಂದ ಹಾಗೂ ಚುನಾವಣಾ ದೃಷ್ಟಿಯಿಂದ ನೀಡಿದ್ದಾರೆ ಎಂದು ಜೋಶಿ ಹೇಳಿದ್ದಾರೆ. ಇಂತಹ ಹೇಳಿಕೆ ಘೋರವಾಗಿದೆ" ಎಂದು ಆಕ್ರೋಶ ವ್ಯಕ್ತಪಡಿಸಿದರು



ಲಕ್ಷ್ಮೇಶ್ವರ ತಾಲೂಕಿನ ವೀರ ಕನ್ನಡಿಗ ಟಿಪ್ಪು ಸುಲ್ತಾನ ಸೇನೆಯಿಂದ ಭಾನುವಾರ ಪಟ್ಟಣದಲ್ಲಿ ರಾಜ್ಯೋತ್ಸವ ಹಾಗೂ ಟಿಪ್ಪು ಸುಲ್ತಾನ್‌ರ 274ನೇ ಜಯಂತ್ಯುತ್ಸವ ಆಚರಿಸಲಾಯಿತು. ಟಿಪ್ಪು ಸೇನೆ ಸಂಘಟನೆಯ ಅಧ್ಯಕ್ಷ ಜಾಕೀರಹುಸೇನ ಹವಾಲ್ದಾರ, ಎನ್.ಎಂ. ಗದಗ, ದಾದಾಪೀರ ಹಜರತ್ ಪಟೇಲ್, ಮಹಮ್ಮದಲಿ ಸಾಧಿಕ್, ಶಫೀಕ ಸಿದ್ದಾಪುರ, ಶಾಹಿಲ್ ಅಖ್ತರ್ ಹಾಫೀಜ್, ಉಸ್ಮಾನ ಹಜರತ್, ಮುಸ್ತಾಕ ಅಫ್ಜಲ್ ಸ್ಥೆರಿದಂತೆ ಹಲವರಿದ್ದರು.

## ಕವನ ಟ್ರಾಫಿಕ್ ರೂಲ್ಸ್



ಸಿಗ್ನಲ್ ಜಂಪ್ ಮಾಡಿ ಯಾರಿಗೂ ತೊಂದರೆ ಕೊಡಬೇಡಿ
ಹೆಲ್ಮೆಟ್ ಹಾಕ್ಕೊಳ್ಳಿ ನಿಮ್ಮ ಜೀವ ಉಳಸ್ಕೊಳಿ.
ಟ್ರಾಫಿಕ್ ರೂಲ್ಸು ಫಾಲೋ ಮಾಡಿ ನೆಗ್ಲೆಟ್ ಮಾಡ್ಬೇಡಿ
ಬಾಯ್ ಬಾಯ್ ಬಡ್ಕೊಬೇಡಿ.
ಚಿಕ್ಕೋರ್ ಕೈಲಿ ಗಾಡಿ ಕೊಟ್ಟು ನಗತಾ ಕೂಡಬೇಡಿ
ಇನ್ಸೂರೆನ್ಸು ಲೈಸೆನ್ಸ್ ಇಲ್ದೆ ಗಾಡಿ ತೆಗಿಬೇಡಿ
ಓವರ್ ಸ್ಪೀಡಲ್ ಗಾಡಿ ಹೊಡದು ಡ್ಯಾಮೇಜ್ ಆಗ್ಬೇಡಿ
ಕುಡದು ಕೈಯಲ್ ಗಾಡಿ ಹಿಡದು ಪಲ್ಟಿ ಹೊಡಿಬೇಡಿ
ಕೈಕಾಲ್ ಮುರಕೊಂಡ್ ಪ್ರಾಣಾ ಕಳಕೊಂಡ್ ತೊಂದರೆ ಕೊಡಬೇಡಿ
ಮನೇಲ್ ತೊಂದರೆ ಕೊಡಬೇಡಿ
ಎಚ್ಚರದಿಂದ ಬದುಕಿ ಹೆಲ್ತ್ ಇಂಪಾರ್ಟೆಂಟ್ ನೋಡಿ
ಹೆಲ್ತಿಗಿಂತ ಇಂಪಾರ್ಟೆಂಟ್ ಏನಿಲ್ಲ ಬಿಡಿ
ಬದುಕಲ್ ಏನಿಲ್ಲ ಬಿಡಿ

– ಮಂಜುನಾಥ ಸಜ್ಜನರ.



ಜೆಡಿಎಸ್ ಪಕ್ಷದ ಚನ್ನಪಟ್ಟಣದ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರಿಗೆ ಚನ್ನಪಟ್ಟಣದ ಚುನಾವಣೆ ಪ್ರಚಾರದಲ್ಲಿದಾಗ ಜೆಡಿಎಸ್ ಪಕ್ಷದ ರಾಜ್ಯ ವಕ್ತರ ವೆಂಕನಗೌಡ ಆರ್ ಗೋವಿಂದಗೌಡ್ರ ಶುಭ ಹಾರೈಸಿದರು.

### ಮಕ್ಕಳಿಲ್ಲದ ದಂಪತಿಗೆ ದತ್ತು ಮಗು ಹಸ್ತಾಂತರ

# ಸೇವಾ ಭಾರತಿ ಸಂಸ್ಥೆಯ ಸೇವೆ ಅಮೂಲ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಜನಮುಖಿ, ಸಮಾಜಮುಖಿಯಾಗಿ ಕಾರ್ಯ ಮಾಡುತ್ತಿರುವ ಸೇವಾ ಭಾರತಿ ಟ್ರಸ್ಟ್‌ನ ಸೇವೆ ಅಮೂಲ್ಯವಾದದ್ದು ಎಂದು ಗದಗ-ಬೆಟಗೇರಿ ನಗರಸಭೆಯ ಮಾಜಿ ಅಧ್ಯಕ್ಷ, ಗಣ್ಯ ಉದ್ಯಮಿ ಶಿವಣ್ಣ ಮುಳಗುಂದ ಹೇಳಿದರು.

ಅವರು ಸೋಮವಾರ ಬೆಟಗೇರಿಯ ಸೇವಾಭಾರತಿ ಅಮೂಲ್ಯ ದತ್ತು ಸ್ವೀಕಾರ ಸಂಸ್ಥೆಯಲ್ಲಿ ಪೋಷಣೆಗೊಂಡ ಗಂಡು ಮಗುವನ್ನು ಮೈಸೂರು ಜಿಲ್ಲೆಯ ಕೇತುಪುರ ಗ್ರಾಮದ ಮಕ್ಕಳಿಲ್ಲದ ದಂಪತಿಗಳಿಗೆ ಹಸ್ತಾಂತರಿಸಿ ಮಾತನಾಡಿದರು. ಹೆತ್ತವರಿಗೆ ಬೇಡವಾದ ಮಗುವನ್ನು ಪೋಷಿಸಿ ಮಕ್ಕಳಿಲ್ಲದ ದಂಪತಿಗಳ ಮಡಿಲಿಗೆ ಕಾನೂನಿನ ಚೌಕಟ್ಟಿನಲ್ಲಿ ದತ್ತು ನೀಡುವ ಕಾರ್ಯವನ್ನು ಮಾಡುತ್ತಿರುವ ಈ ಸಂಸ್ಥೆಯ ಕಾರ್ಯ ಮಾನವೀಯತೆ ಹಾಗೂ ಪುಣ್ಯದ ಕೆಲಸವಾಗಿದೆ. ಒಬ್ಬರಿಗೆ ಬೇಡವಾದ ಮಗು ಇನ್ನೊಬ್ಬರಿಗೆ ಮುದ್ದು. ಅಷ್ಟೇ ಅಲ್ಲ, ಮಗುವಿಗೆ ಭವ್ಯ ಭವಿಷ್ಯ ನಿರ್ಮಾಣಕ್ಕೆ ಈ ಸಂಸ್ಥೆ ಕೊಂಡಿಯಾಗಿ ಕಾರ್ಯ ಮಾಡುತ್ತಿರುವದು ಅಭಿನಂದನೀಯ ಎಂದರು.




ಸಂಘ-ಸಂಸ್ಥೆಗಳನ್ನು ಕಟ್ಟುವದು, ಮುನ್ನಡೆಸುವದು ಬಹು ಕಷ್ಟದ ಕೆಲಸ. ಆದಾಗ್ಯೂ ಸೇವಾ ಭಾರತಿ ಟ್ರಸ್ಟ್ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆ ಗದಗ ಪರಿಸರದಲ್ಲಿ ಒಳ್ಳೆಯ ಕಾರ್ಯ ಮಾಡುತ್ತಿದೆ. ಈ ಸೇವಾ ಕಾರ್ಯದಲ್ಲಿ ತಮ್ಮನ್ನು ಸಮರ್ಪಣಾ ಭಾವದಿಂದ ತೊಡಗಿಸಿಕೊಂಡ ಸೇವಾಕರ್ತರನ್ನು ಅಭಿನಂದಿಸಿದರು. ಇನ್ನೋರ್ವ ಮುಖ್ಯ ಅತಿಥಿ ಸಖಿ ಒನ್ ಅಧೀಕ್ಷಕಿ ಸುಜಾತಾ ಶಾಸ್ತ್ರೀಮಠ ಮಾತನಾಡಿ, ಮನುಷತ್ವ ಮತ್ತು ಮಾನವೀಯತೆಯನ್ನು ಮಿಡಿಯುವ ಈ ಸಮಯ ಅವಿಸ್ಮರಣೀಯವಾದದ್ದು. ಮಗುವಿನ ಭವಿಷ್ಯದ ದಿಕ್ಕು ಬದಲಿಸುವ ಪರ್ವ ಕಾಲವಿದು ಎಂದರು.

ಗದಗ-ಬೆಟಗೇರಿ ನಗರಸಭೆಯ ಮಾಜಿ ಅಧ್ಯಕ್ಷೆ ನಾಗರತ್ನಾ ಮುಳಗುಂದ ಹಾಗೂ ಶಿವಣ್ಣ ಮುಳಗುಂದ ದಂಪತಿಗಳು ಹರೀಶ್‌ಕುಮಾರ ಹಾಗೂ ನಾಗಮ್ಮ ದಂಪತಿಗಳಿಗೆ ಮಗುವನ್ನು ಹಸ್ತಾಂತರಿಸಿ ಮಗುವಿನ ಭವಿಷ್ಯಕ್ಕೆ ಶುಭ ಹಾರೈಸಿದರು.

ಉಮಾ ಚನ್ನಪ್ಪನವರ ಪ್ರಾರ್ಥಿಸಿದರು. ಸುಭಾಸ ಬಬಲಾದಿ ಸ್ವಾಗತಿಸಿದರು. ಮಂಜುನಾಥ ಚನ್ನಪ್ಪನವರ ಸಂಸ್ಥೆಯ ಕಾರ್ಯಚಟುವಟಿಕೆಗಳನ್ನು ವಿವರಿಸಿದರು. ನಾಗವೇಣಿ ಕಟ್ಟಿಮನಿ ಪರಿಚಯಿಸಿದರು. ನರಸಿಂಹ ಕಾಮಾರ್ತಿ ನಿರೂಪಿಸಿದರು. ಕೊನೆಗೆ ರಾಜೇಶ ಖಟವಟೆ ವಂದಿಸಿದರು.

ಸಮಾರಂಭದಲ್ಲಿ ಲಲಿತಾಬಾಯಿ ಮೇರವಾಡೆ, ಗುರುಸಿದ್ಧಪ್ಪ ಕೊಣ್ಣೂರ, ಅನಿಲ ಗಡ್ಡಿ, ಬಸವರಾಜ ನಾಗಲಾಪೂರ, ಗಣೇಶ ಮಾಗುಂಡ, ಆನಂದಪ್ಪ ಅಂಟಿನ, ಜೀತೇಂದ್ರ ಶಹಾ, ಬಸವರಾಜ ಪಲ್ಲೇದ, ಅಭಿಷೇಕ ಮಾಳೋದೆ, ಪ್ರಮೋದ ಹಿರೇಮಠ, ಶ್ರೀಧರ ಕಾಂಬಳೆ ಮುಂತಾದವರು ಪಾಲ್ಗೊಂಡಿದ್ದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ, ಇದು ಮನ ಮಿಡಿಯುವ ಸಂದರ್ಭ. ಮಾತು ಕೃತಿಯಾಗಿ ಪರಿವರ್ತನೆಗೊಳ್ಳುವ ಕಾಲಘಟ್ಟ. ದತ್ತು ಮಗುವನ್ನು ಪಡೆದ ದಂಪತಿಗಳು ಮಗುವಿಗೆ ಉತ್ತಮ ಭವಿಷ್ಯವನ್ನು ರೂಪಿಸಲು ಬದ್ಧತೆಯಿಂದ ಕಾರ್ಯೋನ್ಮುಖರಾಗಲಿ ಎಂದರು.

### ಧರ್ಮ ಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸಂತೃಪ್ತಿಗಿಂತ ಮಿಗಿಲಾದ ಸಂಪತ್ತಿಲ್ಲ

■ವಿಜಯಸಾಕ್ಷಿ ಸುದ್ದಿ, ಭದ್ರಾವತಿ

ಮನುಷ್ಯನ ಮನಸ್ಸು ಸಿರಿವಂತವಾದರೆ ಸಂಪತ್ತು ಇಲ್ಲದಿದ್ದರೂ ನಾವು ಸಿರಿವಂತರೇ. ಮನಸ್ಸೇ ಬಡವಾಗಿದ್ದರೆ ನಮ್ಮಲ್ಲಿ ಸಂಪತ್ತು ಇದ್ದರೂ ನಾವು ಬಡವರೇ. ಸಂತೃಪ್ತಿಗಿಂತ ಶ್ರೇಷ್ಠವಾದ ಸಂಪತ್ತಿಲ್ಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಅವರು ಸೋಮವಾರ ನಗರದ ಸಹ್ಯಾದ್ರಿ ಬಡಾವಣೆಯಲ್ಲಿ ಜರುಗಿದ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಆಶೆ ಕಳೆದುಕೊಂಡು ಬದುಕಬಹುದು. ಆದರೆ ಆಸಕ್ತಿ ಕಳೆದುಕೊಂಡು ಬದುಕಬಾರದು. ಆಡುವ ಮಾತುಗಳಿಗೆ ಕೊಲ್ಲುವ ಮತ್ತು ಕಾಪಾಡುವ ಸಾಮರ್ಥ್ಯ ಎರಡೂ ಇದೆ. ಮಾತುಗಳಲ್ಲಿ ಕರುಣೆ ಹಾಗೂ ನೈಜತೆಯಿದ್ದರೆ ಬದುಕು ಬಲಗೊಳ್ಳುತ್ತದೆ. ಹಣವನ್ನು ಇವತ್ತಲ್ಲ ನಾಳೆಯಾದರೂ ಸಂಪಾದಿಸಬಹುದು. ಆದರೆ ಜೊತೆಗಿರುವ ವ್ಯಕ್ತಿಯನ್ನು ಕಳೆದುಕೊಳ್ಳಬಾರದು. ಸಮಯ, ಸ್ನೇಹ, ಆರೋಗ್ಯ ಇವುಗಳಿಗೆ ಬೆಲೆ ಕಟ್ಟಲಾಗದು. ಜೀವನದ ಕೆಟ್ಟ ಘಟನೆಗಳನ್ನು ಮರೆತುಬಿಡಬೇಕು. ಆದರೆ ಅದರಿಂದ ಕಲಿತ ಪಾಠಗಳನ್ನು ಯಾವಾಗಲೂ ಮರೆಯಬಾರದು. ಸಾಸಿವೆಯಷ್ಟು ಸುಖಕ್ಕೆ ಸಾಗರದಷ್ಟು ಕಷ್ಟ ಬಿಟ್ಟಿದ್ದಲ್ಲ.



ಸುಖ ದುಃಖಗಳಲ್ಲಿ ಸಮನಾಗಿ ಬಾಳುವುದೇ ಮನುಷ್ಯನ ಗುರಿಯಾಗಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ಜೀವನ ಮೌಲ್ಯಗಳನ್ನು ಬೋಧಿಸಿ ಉದ್ಧರಿಸಿದ್ದಾರೆ. ದೇವರು ಮತ್ತು ಶ್ರೀ ಗುರುವನ್ನು ಯಾವತ್ತಿಗೂ ಮರೆಯಬಾರದೆಂದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ಚನ್ನಗಿರಿಯ ಡಾ. ಕೇದಾರ ಶಿವಶಾಂತವೀರ ಶಿವಾಚಾರ್ಯರಿಂದ ಪ್ರಾರ್ಥನೆ ಜರುಗಿತು. ತಾವರೆಕೆರೆ ಡಾ. ಅಭಿನವ ಸಿದ್ಧಲಿಂಗ ಶಿವಾಚಾರ್ಯರು ನಿರೂಪಿಸಿದರು. ಮನು ಸರ್ವರನ್ನು ಸ್ವಾಗತಿಸಿದರು. ಸ್ವಾಮಿ ವಂದನಾರ್ಪಣೆ ಸಲ್ಲಿಸಿದರು. ಶಿವಮೊಗ್ಗದ ಶಾಂತಾ ಆನಂದರಿಂದ ಸುಗಮ ಸಂಗೀತ ಕಾರ್ಯಕ್ರಮ ಜರುಗಿತು.

ಈ ಪವಿತ್ರ ಸಮಾರಂಭದಲ್ಲಿ ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು, ಮಳಲಿಮಠದ ಡಾ॥ನಾಗಭೂಷಣ ಶಿವಾಚಾರ್ಯರು, ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯರು ಪಾಲ್ಗೊಂಡು ಉಪದೇಶಾಮೃತವನ್ನಿತ್ತರು. ಇದೇ ಸಂದರ್ಭದಲ್ಲಿ ಲಿಂ. ಬಿ.ಎಚ್. ಮಹದೇವಪ್ಪನವರ 10ನೇ ವರ್ಷದ ಪುಣ್ಯಾರಾಧನೆ ಅಂಗವಾಗಿ ವಿವಿಧ ಕಾರ್ಯಕ್ರಮಗಳು ಜರುಗಿದವು. ಕೂಡ್ಲಿಗೆರೆ ಹಾಲೇಶ್, ಬಿ.ಕೆ. ಜಗನ್ನಾಥ ಹಾಗೂ ವೀರಗಾಸೆ ತಂಡದವರು ಪಾಲ್ಗೊಂಡಿದ್ದರು.

### ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಮಾಹಿತಿ

# ನ.18ರಂದು ಲಕ್ಷ ದೀಪೋತ್ಸವ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಕಾರ್ತಿಕ ಮಾಸದಲ್ಲಿ ಪ್ರತಿ ಐದು ವರ್ಷಕ್ಕೊಮ್ಮೆ ನಡೆಯುವ ಲಕ್ಷ ದೀಪೋತ್ಸವ ಕಾರ್ಯಕ್ರಮಕ್ಕೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದ್ದು, ನ.18ರಂದು ಲಕ್ಷ ದೀಪೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಹೇಳಿದರು.

ಅವರು ದೇವಸ್ಥಾನದ ಆವರಣದಲ್ಲಿ ಸೋಮವಾರ ಲಕ್ಷ ದೀಪೋತ್ಸವ ಕಾರ್ಯಕ್ರಮದ ಆಮಂತ್ರಣ ಪತ್ರಿಕೆ, ಪ್ರಚಾರ ಪತ್ರಿಕೆಗಳನ್ನು ಬಿಡುಗಡೆಗೊಳಿಸಿ ಮಾತನಾಡಿದರು. ಶ್ರೀ ಸೋಮೇಶ್ವರ ದೇವಸ್ಥಾನವನ್ನು ಇನ್ಫೋಸಿಸ್ ಮುಖ್ಯಸ್ಥೆ ಸುಧಾಮೂರ್ತಿಯವರು ಜೀರ್ಣೋದ್ಧಾರಗೊಳಿಸಿದ ವೇಳೆಯಲ್ಲಿ ದೇವಸ್ಥಾನ ಲೋಕಾರ್ಪಣೆಯ ನಿಮಿತ್ತ ಲಕ್ಷ ದೀಪೋತ್ಸವ ಹಮ್ಮಿಕೊಳ್ಳಲಾಗಿತ್ತು. ಅಲ್ಲಿಂದ ಪ್ರತಿ ಐದು ವರ್ಷಕ್ಕೊಮ್ಮೆ ಅದ್ದೂರಿ ಲಕ್ಷ ದೀಪೋತ್ಸವ ಆಯೋಜಿಸಲು ನಿರ್ಧರಿಸಲಾಗಿತ್ತು. ಕಳೆದ ಬಾರಿ ಕಾರಣಾಂತರಗಳಿಂದ ಲಕ್ಷ ದೀಪೋತ್ಸವ ಕಾರ್ಯಕ್ರಮ ನೆರವೇರಿಸಲಾಗಿರಲಿಲ್ಲ. ಈ ಹಿನ್ನೆಲೆಯಲ್ಲಿ ಪ್ರಸ್ತುತ ವರ್ಷದಲ್ಲಿ ಕಾರ್ತಿಕಮಾಸದಲ್ಲಿ ಈ ಕಾರ್ಯಕ್ರಮವನ್ನು ಅದ್ದೂರಿಯಾಗಿ ನಡೆಸಲು ನಿರ್ಧರಿಲಾಗಿದ್ದು, ನ.18ರಂದು ಸೋಮವಾರ ಸಂಜೆ ಲಕ್ಷದೀಪೋತ್ಸವ ನಡೆಯಲಿದೆ. ಅಂದು ಸುಮಾರು 20 ಸಾವಿರ ಜನರು ಸೇರುವ ನಿರೀಕ್ಷೆಯಿದೆ. ಮಹಾಪ್ರಸಾದದ ವ್ಯವಸ್ಥೆಯನ್ನು ಮಾಡಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸುವಂತೆ ಮನವಿ ಮಾಡಿದರು. ಲಕ್ಷ ದೀಪೋತ್ಸವ ಕಮಿಟಿ ಖಜಾಂಚಿ ಚನ್ನಪ್ಪ ಜಗಲಿ ಮಾತನಾಡಿ, ಅಂದು ದೇವಸ್ಥಾನಕ್ಕೆ ವಿಶೇಷ ವಿದ್ಯುತ್ ದೀಪಾಲಂಕಾರ ಮತ್ತು ಪುಷ್ಪಾಲಂಕಾರ ಮಾಡಲಾಗುತ್ತದೆ. ಈಗಾಗಲೇ ಪಟ್ಟಣ ಸೇರಿದಂತೆ ವಿವಿಧ ಕಡೆಗಳಿಂದ ಭಕ್ತರು ದೇಣಿಗೆ ಸಲ್ಲಿಸಿದ್ದು, ಅನಾವಶ್ಯಕ ವೆಚ್ಚ ತಪ್ಪಿಸುವ ಜತೆಗೆ ಸಂಪ್ರದಾಯಕ್ಕೆ ಒತ್ತು ನೀಡಲಾಗುತ್ತಿದೆ. ಪಾವನ ಸಾನ್ನಿಧ್ಯವನ್ನು ಮಹಾರಾಷ್ಟ್ರ ಕೊಲ್ಲಾಪುರದ ಶ್ರೀ ಕ್ಷೇತ್ರ ಸಿದ್ಧಗಿರಿ ಮಹಾಸಂಸ್ಥಾನ ಕನ್ನೇರಿಯ ಅದೃಶ್ಯ ಕಾಡಸಿದ್ದೇಶ್ವರ ಮಹಾಸ್ವಾಮಿಗಳು ವಹಿಸಿಕೊಳ್ಳುವರು. ದಿವ್ಯ ಉಪಸ್ಥಿತಿಯನ್ನು ಮುಕ್ತಿಮಂದಿರ ಧರ್ಮ ಕ್ಷೇತ್ರದ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹಾಗೂ ಆಧ್ಯಾತ್ಮಿಕ ವಿದ್ವಾಂಸರಾದ ಮಂಗಳೂರಿನ ಡಾ. ಎಮ್ಮೆಸ್ಸೆಂ ಅಬ್ದುಲ್ ರಶೀದ ಝೈನಿ ಕಾಮಿಲ್ ಸಖಾಫಿ ವಹಿಸಿಕೊಳ್ಳುವರು. ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲ ಮತ್ತು ಮಾಜಿ ಸಿಎಂ, ಸಂಸದ ಬಸವರಾಜ ಬೊಮ್ಮಾಯಿ ಕಾರ್ಯಕ್ರಮ ಉದ್ಘಾಟಿಸುವರು ಎಂದರು.



ವರ್ತಕ ಬಸವೇಶ ಮಹಾಂತಶೆಟ್ಟರ ಮಾತನಾಡಿ, ಲಕ್ಷ್ಮದೀಪೋತ್ಸವ ಕಾರ್ಯಕ್ರಮಕ್ಕೆ ಪಕ್ಷ, ಜಾತಿ, ಧರ್ಮ ಭೇದ ಮರೆತು ಎಲ್ಲರೂ ಪಾಲ್ಗೊಳ್ಳೋಣ. ಮಠಾಧೀಶರು, ವಿಚಾರವಂತರು, ಹಿರಿಯರು, ಗಣ್ಯರು ಆಗಮಿಸಲಿದ್ದು ಎಲ್ಲರೂ ಸೇರಿ ಅದ್ದೂರಿಯಾಗಿ ಲಕ್ಷದೀಪೋತ್ಸವ ಯಶಸ್ವಿಗೊಳಿಸೋಣ ಎಂದರು. ಈ ವೇಳೆ ಗುರುರಾಜ ಪಾಟೀಲಕುಲಕರ್ಣಿ, ಸುರೇಶ ರಾಚನಾಯ್ಕರ್, ಶಿವಯೋಗಿ ಅಂಕಲಕೋಟಿ, ವಿರುಪಾಕ್ಷ ಆದಿ, ಮಯೂರಗೌಡ ಪಾಟೀಲ, ನಂದೀಶ ಬಂಡಿವಾಡ, ಎನ್.ಆರ್. ಸಾತಪೂತೆ, ಪ್ರಕಾಶ ಕೊಂಚಿಗೇರಿಮಠ, ಅಶೋಕಗೌಡ ಪಾಟೀಲ, ರಾಘವೇಂದ್ರ ಪೂಜಾರ, ಗಂಗಾಧರ ಉಮಚಗಿ, ರಾಜಶೇಖರಯ್ಯ ಶಿಗ್ಲಿಮಠ, ನೀಲಪ್ಪ ಕನವಳ್ಳಿ, ಬಸಣ್ಣ ಪುಠಾಣಿ, ಸೋಮಣ್ಣ ತಂಡಿಗೇರ ಸೇರಿದಂತೆ ಅನೇಕರಿದ್ದರು.

ಅಧ್ಯಕ್ಷತೆಯನ್ನ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ವಹಿಸುವರು. ಅತಿಥಿಗಳಾಗಿ ಶಾಸಕ ಡಾ.ಚಂದ್ರು ಲಮಾಣಿ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ಜಿ.ಎಂ. ಮಹಾಂತಶೆಟ್ಟರ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ ಸೇರಿ ಹಲವರು ಆಗಮಿಸುವರು ಎಂದುದೀಪೋತ್ಸವ ಕಮಿಟಿ ಖಜಾಂಚಿ ಚನ್ನಪ್ಪ ಜಗಲಿ ಮಾಹಿತಿ ನೀಡಿದರು.

### ಗದಗ ಪ್ರಿಮಿಯರ್ ಲೀಗ್ 2ನೇ ಆವೃತ್ತಿ

# ತಂಡಗಳ ರೋಚಕ ಕಾದಾಟ

■ವಿಜಯಸಾಕ್ಷಿ ಸುದ್ದಿ, ಗದಗ

ವಿಮಲ್ ರೆಸಾರ್ಟ್ ಪ್ರಾಯೋಜಕತ್ವದಲ್ಲಿ ಗದಗ ಪ್ರಿಮಿಯರ್ ಲೀಗ್ 2ನೇ ಆವೃತ್ತಿಯ 2ನೇ ದಿನದ ಮೊದಲ ಪಂದ್ಯ ಗದಗ ಕ್ರಷರ್ಸ್ ಮತ್ತು ಗದಗ ಟೈಟನ್ಸ್ ತಂಡದ ನಡುವೆ ನಡೆಯಿತು. ಕ್ರಷರ್ಸ್ ತಂಡ ಮೊದಲ ಬ್ಯಾಟಿಂಗ್ ಆಯ್ದುಕೊಂಡಿತು. ಕ್ರಷರ್ಸ್ ತಂಡದ ಪರ ಅಲ್ತಮಶ ಖಾಜಿ 49 ರನ್, ಸೈಯದ್ 15 ಹಾಗೂ ಅನಿತ್ 13 ರನ್ ಮಾಡಿದರು. ಬೌಲಿಂಗ್‌ನಲ್ಲಿ ಟೈಟನ್ಸ್ ತಂಡ ಜೈದ್ ಅತ್ತಾರ 3, ಸಮೀರ್ ದೇವೇಶ ಹಾಗೂ ಕಾರ್ತಿಕ ತಲಾ ಒಂದು ವಿಕೆಟ್ ಪಡೆದರು. ಉತ್ತರವಾಗಿ ಬ್ಯಾಟಿಂಗ್ ನೀಡಿದ ಟೈಟನ್ಸ್ ತಂಡದ ಸಚಿನ್ 22, ಪ್ರಸಾದ 18, ಜೈದ್ 16 ರನ್ ಮಾಡಿದರು. ಬೌಲಿಂಗ್‌ನಲ್ಲಿ ಪ್ರಜ್ವಲ್ 2, ಕಾರ್ತಿಕ 2 ವಿಕೆಟ್ ಪಡೆದರು. ಕ್ರಷರ್ಸ್ ತಂಡ 16 ರನ್‌ಗಳ ರೋಚಕ ಜಯ ಸಾಧಿಸಿತು. ಪಂದ್ಯ ಪುರಷೋತ್ತಮವನ್ನು ಅಲ್ತಮಶ ಖಾಜಿ ಪಡೆದರು.

2ನೇ ಪಂದ್ಯದಲ್ಲಿ ಗದಗ ವಲ್ಚರ್ಸ್ ಹಾಗೂ ಗದಗ ಸ್ಟ್ರೈಕರ್ಸ್ ನಡುವೆ ನಡೆಯಿತು. ಗದಗ ವಲ್ಚರ್ಸ್ ತಂಡ ಟಾಸ್ ಗೆದ್ದು ಬ್ಯಾಟಿಂಗ್ ಮಾಡಿತು. ವಲ್ಚರ್ಸ್ ತಂಡದ ಪರ ವಿನಯ ಬಾರಕೇರ 40 ರನ್, ಸಚಿನ್ 29, ಸಾಯಿಕಿರಣ 25 ರನ್ ಮಾಡಿದರು. ಸತೀಶಕುಮಾರ ಮಾಳೋದೆ ಪ್ರಮುಖ 4 ವಿಕೆಟ್‌ಗಳನ್ನು ಪಡೆದರು. ಮಂಜು 3 ವಿಕೆಟ್ ಹಾಗೂ ಶಿವರಾಜ ಕರಡಿ 1 ವಿಕೆಟ್ ಪಡೆದರು. ಇದಕ್ಕೆ ಉತ್ತರವಾಗಿ ಬ್ಯಾಟಿಂಗ್ ನೀಡಿದ ಸ್ಟ್ರೈಕರ್ಸ್ ತಂಡ ರವಿ ರಾಮಗಿರಿ 41, ತೌಫೀಕ್ 25 ರನ್, ಕಿಶೋರ 28 ರನ್ ಬಾರಿಸಿ ಸ್ಟ್ರೈಕರ್ಸ್ ತಂಡ 4 ವಿಕೆಟ್‌ಗಳಿಂದ ವಿಜಯಶಾಲಿ ಆಯಿತು. ಪಂದ್ಯ ಪುರಷೋತ್ತಮವನ್ನು ಸತೀಶಕುಮಾರ ಮಾಳೋದೆ ಪಡೆದರು.

3ನೇ ದಿನದ ಮೊದಲ ಪಂದ್ಯ ಸ್ಟ್ರೈಕರ್ಸ್ ಹಾಗೂ ಕ್ರಷರ್ಸ್ ನಡುವೆ ನಡೆಯಿತು. ಗದಗ ಸ್ಟ್ರೈಕರ್ಸ್ ತಂಡ ಟಾಸ್ ಗೆದ್ದು ಮೊದಲ ಬ್ಯಾಟಿಂಗ್ ಮಾಡಿತು. ಸ್ಟ್ರೈಕರ್ಸ್ ತಂಡದ ಪರ ರವಿ ರಾಮಗಿರಿ 42, ತೌಫಿಕ್ 31, ಕಿಶೋರ ಉಪ್ಪಾರ 16 ರನ್ ಕೊನೆಯ ಓವರ್‌ಗಳಲ್ಲಿ ಜೈದ್ ಬಳ್ಳಾರಿ 10 ರನ್‌ಗಳನ್ನು ಮಾಡಿ ಗದಗ ಕ್ರಷರ್ಸ್ ತಂಡಕ್ಕೆ 128 ರನ್‌ಗಳ ಗುರಿಯನ್ನು ನೀಡಿದರು. ಬೌಲಿಂಗ್‌ನಲ್ಲಿ ಕ್ರಷರ್ಸ್ ತಂಡದ ವೈಭವ ಬದಿ 2, ರಾಮು 2 ವಿಕೆಟ್ ಪಡೆದರು. ಉತ್ತರವಾಗಿ ಬ್ಯಾಟಿಂಗ್‌ಗೆ ಇಳಿದ ಕ್ರಷರ್ಸ್ ತಂಡದ ಕಾರ್ತಿಕ 23, ಸೋಮು 18, ಪ್ರಜ್ವಲ್ 17 ರನ್ ಗಳಿಸಲಷ್ಟೇ ಶಕ್ತವಾಯಿತು. ಬೌಲಿಂಗ್‌ನಲ್ಲಿ ತೌಫಿಕ್ 3, ಶಿವು ಕರಡಿ 3, ಕಿಶೋರ, ಸತೀಶ, ಅಮೃತ್ ತಲಾ ಒಂದು ವಿಕೆಟ್ ಪಡೆದರು. ಗದಗ ಸ್ಟ್ರೈಕರ್ಸ್ ತಂಡ 9 ರನ್‌ಗಳಿಂದ ರೋಚಕ ವಿಜಯ ಸಾಧಿಸಿತು. ಪಂದ್ಯ ಪುರಷೋತ್ತಮ ತೌಫೀಕ್ ಬಳ್ಳಾರಿ ಪಡೆದರು.

2ನೇ ಪಂದ್ಯದಲ್ಲಿ ಜಿ.ಪಿ.ಎಲ್-2 ಕೊನೆಯ ಲೀಗ್ ಪಂದ್ಯ ಟೈಟನ್ಸ್ ಹಾಗೂ ಗದಗ ವಲ್ಚರ್ಸ್ ತಂಡದ ನಡುವೆ ನಡೆಯಿತು. ಗದಗ ಟೈಟನ್ಸ್ ತಂಡ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿತು. ತಂಡದ ಪರ ಪ್ರಸಾದ ಕಲಬುರ್ಗಿ 45, ದೇವೇಶ ಜೈನ್ 28, ಪವನ 28, ಕಾರ್ತಿಕ 2 ರನ್ ಮಾಡಿ ಜಿ.ಪಿ.ಎಲ್-2ರ ಬೃಹತ್ ಮೊತ್ತ 183 ರನ್‌ಗಳನ್ನು ಗಳಿಸಿದರು. ಬೌಲಿಂಗ್‌ನಲ್ಲಿ ಪವನ 2, ಸಚಿನ್, ವಿನಯ, ನಿಹಾಲಆಕಾಶ ಮತ್ತು ಅಬ್ಬಾಸ ತಲಾ ಒಂದು ವಿಕೆಟ್ ಪಡೆದರು. ಇದಕ್ಕೆ ಉತ್ತರವಾಗಿ ಬ್ಯಾಟಿಂಗ್‌ಗೆ ಇಳಿದ ವಲ್ಚರ್ಸ್ ತಂಡ ವಿನಯ ಬಾರಕೇರ 75, ಪವನ್ 17, ನಿಹಾಲಆಕಾಶ 12 ರನ್ ಗಳಿಸಿದರು. ಟೈಟನ್ಸ್ ತಂಡ ನೀಡಿದ ಗುರಿಯನ್ನು ಮುಟ್ಟಲಾರದೇ 39 ರನ್‌ಗಳಿಂದ ಗದಗ ಟೈಟನ್ಸ್ ತಂಡ ಜಯ ಗಳಿಸಿತು. ಪಂದ್ಯ ಪುರಷೋತ್ತಮ ಪ್ರಸಾದ ಕಲಬುರ್ಗಿ ಪಡೆದರು.

ವೀರವನಿತೆ ಒನಕೆ ಓಬವ್ವ ಅವರ ಜಯಂತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ


# ಒನಕೆ ಓಬವ್ವ ಸ್ತ್ರೀಕುಲದ ಅಭಿಮಾನ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಒನಕೆ ಓಬವ್ವ 18ನೇ ಶತಮಾನದಲ್ಲಿ ಸಾಮಾನ್ಯ ಮಹಿಳೆ. ಚಿಕ್ಕ ವಯಸ್ಸಿನಲ್ಲಿಯೇ ಮದುವೆಯಾಗಿ ತನ್ನ ಜೀವನ ಪ್ರಾರಂಭಿಸಿದಳು. ರಾಜರುಗಳು ತಮ್ಮ ಸೇನಾ ಬಲದಿಂದ ತಮ್ಮ ಸಾಮ್ರಾಜ್ಯವನ್ನು ಕಟ್ಟುವ ಕಾಲದಲ್ಲಿ ಒನಕೆ ಓಬವ್ವಳು ರಾಜ್ಯ ರಕ್ಷಣೆ ಮತ್ತು ರಾಜ್ಯಕ್ಕೆ ನಿಷ್ಠಳಾಗಿ ತೋರಿದ ಧೈರ್ಯ ಮತ್ತು ಸಾಹಸಗಳು ಸ್ತ್ರೀಕುಲಕ್ಕೆ ಅತ್ಯಂತ ಅಭಿಮಾನ, ಗೌರವಗಳನ್ನು ತಂದುಕೊಟ್ಟಿವೆ ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಅವರು ಹೇಳಿದರು.

ಅವರು ಸೋಮವಾರ ಬೆಳಿಗ್ಗೆ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದ್ದ ವೀರವನಿತೆ ಒನಕೆ ಓಬವ್ವ ಅವರ ಜಯಂತಿಯ ಅಂಗವಾಗಿ ಒನಕೆ ಓಬವ್ವ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಚಿತ್ರದುರ್ಗದ ಆಟದ ಕ್ರೀಡಾಂಗಣಕ್ಕೆ ಒನಕೆ ಓಬವ್ವ ಕ್ರೀಡಾಂಗಣ ಎಂದು ನಾಮಕರಣ ಮಾಡಿ, ಗೌರವಿಸಲಾಗಿದೆ. ಚಿತ್ರದುರ್ಗದ ಕೋಟೆಯಲ್ಲಿ ಓಬವ್ವ




ಹೈದರಾಲಿಯ ಸೈನಿಕರನ್ನು ಸೋಲಿಸಿದ ಕಿಂಡಿಯನ್ನು ಒನಕೆ ಓಬವ್ವನ ಕಿಂಡಿ ಎಂದು ಕರೆಯಲಾಗುತ್ತದೆ ಎಂದು ಹೇಳಿದರು.

ಒನಕೆ ಒಬ್ಬವ ಒಬ್ಬ ಕೋಟೆ ಕಾವಲುಗಾರನ ಹೆಂಡತಿಯಾಗಿ, ಸಮಯಪ್ರಜ್ಞೆ ಮತ್ತು ಧೈರ್ಯದಿಂದ ಹೋರಾಡಿ, ಮಹಿಳೆಯರ ಸಾಧನೆಗೆ ಪ್ರೇರಕಳಾಗಿದ್ದಾಳೆ. ಅವಳ ಗುಣ, ಸಾಹಸಗಳು ನಮಗೆಲ್ಲ ಮಾದರಿ ಆಗಿವೆ ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ಕವಿವಿಯ ಪ್ರಾಚೀನ ಭಾರತೀಯ ಇತಿಹಾಸ ಮತ್ತು ಶಾಸನಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ. ಎಸ್.ಜಿ. ಛಲವಾದಿ ಅವರು ಒನಕೆ ಓಬವ್ವಳ


ಒನಕೆ ಓಬವ್ವಳು ಯಾವುದೇ ಒಂದು ಸಮಾಜಕ್ಕೆ ಮಾತ್ರ ಸಿಮೀತವಾಗಿಲ್ಲ. ಇಂದಿನ ಮಕ್ಕಳು ನಾಳೆಯ ಪ್ರಜೆಗಳು. ಮಕ್ಕಳಿಗೆ ಈ ಧೀಮಂತ ಮಹಿಳೆಯ ಬಗ್ಗೆ ತಿಳಿಸಬೇಕಾದ ಅಗತ್ಯವಿದೆ. ಓಬವ್ವಳಂತೆ ಮನ್ನ ಯುವತಿಯರೂ ಕೂಡ ಎಲ್ಲಾ ಕಾರ್ಯಗಳಲ್ಲಿ ಧೈರ್ಯದಿಂದ ಮುನ್ನುಗ್ಗುವ ಛಲ ಬೆಳೆಸಿಕೊಳ್ಳಬೇಕು ಎಂದು ಗೀತಾ ಸಿ.ಡಿ ಅಭಿಪ್ರಾಯ ವ್ಯಕ್ತಪಡಿಸಿದರು.

ಜೀವನದ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಸಮಾಜದ ಮುಖಂಡ ಯಲ್ಲಪ್ಪ ಮಂಟೂರು, ದೇವಾನಂದ ರತ್ನಾಕರ, ರವಿ ಸಾಂಬ್ರಾಣಿ ಹಾಗೂ ಇಂದುಮತಿ ಶಿರಗಾಂವಿ ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಅತಿಥಿಗಳ ಪರಿಚಯ ಮಾಡಿದರು. ರವಿ ಕುಲಕರ್ಣಿ ಅವರು ಕಾರ್ಯಕ್ರಮವನ್ನು ನಿರೂಪಿಸಿ, ವಂದಿಸಿದರು. ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಪುರಸಭೆ ಉಪಚುನಾವಣೆಗೆ ನಾಮಪತ್ರ ಸಲ್ಲಿಕೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆಯ ವಾರ್ಡ್ ನಂ.13ರ ಸದಸ್ಯರಾಗಿದ್ದ ನೀಲವ್ವ ಮೆಣಸಿಕಾಯಿ ಅವರ ಅಕಾಲಿಕ ನಿಧನದಿಂದ ತೆರವಾದ ಸ್ಥಾನಕ್ಕೆ ನ.23ರಂದು ಚುನಾವಣೆ ಘೋಷಣೆಯಾಗಿದೆ. ನಾಮಪತ್ರ ಸಲ್ಲಿಸಲು ಕೊನೆಯ ದಿನವಾದ ಸೋಮವಾರ ಇಬ್ಬರು ಅಭ್ಯರ್ಥಿಗಳಿಂದ ಮೂರು ನಾಮಪತ್ರಗಳು ಸಲ್ಲಿಕೆಯಾಗಿವೆ.

ಶೋಭಾ ಬಸವರಾಜ ಮೆಣಸಿನಕಾಯಿಯವರು ಬಿಜೆಪಿ ಅಭ್ಯರ್ಥಿಯಾಗಿ ಬಿ.ಫಾರ್ಮ್ ಸಹಿತವಾಗಿ ನಾಮಪತ್ರ ಸಲ್ಲಿಸಿದರು. ಈ ವೇಳೆ ಬಂಗಾರಪ್ಪ ಮುಳಗುಂದ, ಬಸವರಾಜ ಮೆಣಸಿನಕಾಯಿ, ಭರಮಣ್ಣ ಕೊಡ್ಲಿ, ರಮೇಶ ಹೆಬ್ಬಾಳ ಇದ್ದರು.

ತಾರಾಮತಿ ಮಹಾದೇವಪ್ಪ ಹಂಪಣ್ಣವರ ಅವರು ಬಿಜೆಪಿ ಮತ್ತು ಪಕ್ಷೇತರವಾಗಿ 2 ನಾಮಪತ್ರ ಸಲ್ಲಿಸಿದರು. ಈ ವೇಳೆ ಪುರಸಭೆ ಸದಸ್ಯ ಮಹೇಶ ಹೊಗೆಸೊಪ್ಪಿನ, ಚಂದ್ರು ಹಂಪಣ್ಣವರ, ಗಂಗಾಧರ ಉಮಚಗಿ, ನೀಲಪ್ಪ ತೆಗ್ನಳ್ಳಿ, ಬಸವರಾಜ ಅಣ್ಣಿಗೇರಿ ಇದ್ದರು.

ನ.12ರಂದು ನಾಮಪತ್ರಗಳ ಪರಿಶೀಲನೆ ಮತ್ತು ನ.14 ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ನ.23ರಂದು ಬೆಳಿಗ್ಗೆ 7ರಿಂದ 5 ಗಂಟೆಯವರೆಗೆ ಮತದಾನ ನಡೆಯಲಿದೆ. ನ.26ರಂದು ತಹಸೀಲ್ದಾರ ಕಚೇರಿಯಲ್ಲಿ ಮತಗಳ ಎಣಿಕೆ ನಡೆಯಲಿದೆ. ಚುನಾವಣಾಧಿಕಾರಿ ಚಂದ್ರಶೇಖರ ನರಸಮ್ಮನವರ, ಎಸ್.ಎಂ. ಲಮಾಣಿ ಕಾರ್ಯನಿರ್ವಹಿಸುತ್ತಿದ್ದಾರೆ.

ನಿರಂಜನ ಜ್ಯೋತಿ ಮೃತ್ಯುಂಜಯ ಮಹಾಸ್ವಾಮಿಗಳವರ ಜಯಂತ್ಯುತ್ಸವ

## ಮಹಾಸ್ವಾಮಿಗಳ ವಿಚಾರಗಳು ಸದಾ ಸ್ಮರಣೀಯ



■ವಿಜಯಸಾಕ್ಷಿ ಸುದ್ದಿ, ಡಂಬಳ

ತಾಳ್ಮೆ, ಶ್ರದ್ಧೆ, ಭಕ್ತಿಯ ಮಾರ್ಗದ ಮೂಲಕ ಸಮಾ ಸಮಾಜ ಕಟ್ಟಲು ಭಕ್ತರ ಮಧ್ಯೆ ಇದ್ದು ಭಕ್ತರ ಹೃದಯದಲ್ಲಿ ನೆಲೆಸಿರುವ ನಿರಂಜನ ಜ್ಯೋತಿ ಮೃತ್ಯುಂಜಯ ಮಹಾಸ್ವಾಮಿಗಳು ಹಾಕಿಕೊಟ್ಟ ವಿಚಾರಗಳು ಸದಾ ಕಾಲ ಇರುತ್ತವೆ ಎಂದು ಮುಂಡರಗಿಯ ನಾಡೋಜ ಡಾ. ಅನ್ನದಾನೀಶ್ವರ ಶ್ರೀಗಳು ಹೇಳಿದರು.

ಡಂಬಳ ಹೋಬಳಿಯ ಹಿರೇವಡ್ಡಟ್ಟಿ ಗ್ರಾಮದಲ್ಲಿ ನಿರಂಜನ ಜ್ಯೋತಿ ಮೃತ್ಯುಂಜಯ ಮಹಾಸ್ವಾಮಿಗಳವರ ಜಯಂತ್ಯುತ್ಸವ ಹಾಗೂ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಣಕವಾಡ ಹಿರೇವಡ್ಡಟ್ಟಿ ಮೃತ್ಯುಂಜಯ ಶ್ರೀಗಳು ಮಾತನಾಡಿ, ಭಕ್ತರು ಭಸ್ಮ ಧಾರಣೆ ಮತ್ತು ರುದ್ರಾಕ್ಷಿ ಧಾರಣೆ ಮಾಡುವುದರ ಮೂಲಕ ನಮ್ಮ ಸಂಸ್ಕಾರವನ್ನು ಉಳಿಸಲು ಆದ್ಯತೆ ನೀಡಿ. ನಿರಂಜನ ಜ್ಯೋತಿ ಮೃತ್ಯುಂಜಯ ಶ್ರೀಗಳು ಹಾಕಿಕೊಟ್ಟ ನ್ಯಾಯ, ನೀತಿ, ಸತ್ಯದ ವಿಚಾರಗಳಲ್ಲಿ ನಡೆದರೆ ಉತ್ತಮ ಬದುಕು ನಿಮ್ಮದಾಗಲಿದೆ ಎಂದು ಹೇಳಿದರು.

ಹಿರೇವಡ್ಡಟ್ಟಿಯ ಶಿವಾಚಾರ್ಯ ಶ್ರೀಗಳು ಮಾತನಾಡಿ, ಜಗತ್ತಿನಲ್ಲಿ ದ್ವೇಷದಿಂದ ಏನನ್ನೂ ಸಾಧಿಸಲು ಸಾಧ್ಯವಿಲ್ಲ. ಉತ್ತಮ ಮನೋಭಾವನೆಯನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಮಾತ್ರ ಉತ್ತಮ ಸಾಧನೆ ಮಾಡಲು ಸಾಧ್ಯ. ಪ್ರತಿಯೊಬ್ಬರೂ ಸಾತ್ವಿಕ, ಸತ್ಯ, ನ್ಯಾಯ, ನಿಷ್ಠೆ ಕಾಯಕದ ಬದುಕು ನಿರ್ಮಿಸಿಕೊಳ್ಳುವಂತಾಗಲಿ ಎಂದು ಹೇಳಿದರು.

ಶಿವಶರಣೆ ಡಾ. ನೀಲಮ್ಮ ತಾಯಿ ಮಾತನಾಡಿ, ಭಕ್ತರನ್ನು ಕತ್ತಲೆಯಿಂದ ಬೆಳಕಿನೆಡೆಗೆ ಕೊಂಡೊಯ್ಯಲು 17ನೇ ಶತಮಾನದಲ್ಲಿ ಮೃತ್ಯುಂಜಯ ಶ್ರೀಗಳು ಹಾಕಿಕೊಟ್ಟ ತಪಸ್ಸಿನ ಶಕ್ತಿಯನ್ನು ಮುಂದುವರೆಸಿಕೊಂಡು ಹೋಗುತ್ತಿರುವ ಅಭಿನವ ಮೃತ್ಯುಂಜಯ ಶ್ರೀಗಳು ಸಮಾಜ ಕಟ್ಟಲು ನಿರಂತರವಾಗಿ ಭಕ್ತರ ಒಡನಾಡಿಯಾಗಿ, ಶಿಕ್ಷಣ ಎಂಬ ಶಕ್ತಿಯನ್ನು ಕಟ್ಟುವುದರ ಮೂಲಕ ಹಿರೇವಡ್ಡಟ್ಟಿ ಗ್ರಾಮದಲ್ಲಿ ಪ್ರವಚನ ಹಮ್ಮಿಕೊಂಡು ಭಕ್ತರನ್ನು ಸರಿದಾರಿಯಲ್ಲಿ ನಡೆಯಬೇಕೆಂಬ ಅವರ ಹಂಬಲ ಸಾಕಾರಗೊಳ್ಳಲಿ ಎಂದು ಹೇಳಿದರು.

ವೈದ್ಯರಾದ ಡಾ.ಉಮೇಶ ಪುರದ ಮಾತನಾಡಿ, ನಡೆ-ನುಡಿ-ಭಾವದ ಜೊತೆಗೆ ಸಮ ಸಮಾಜ ನಿರ್ಮಾಣ ಆಗಬೇಕು ಎನ್ನುವ ಹಂಬಲವನ್ನು ಹೊಂದಿದ್ದ ಮೃತ್ಯುಂಜಯ ಶ್ರೀಗಳ ಕಾರ್ಯ ಸದಾ ಕಾಲ ಇರುವಂತದ್ದು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಗ್ರಾಮದ ಹಿರಿಯ ನಾಗರಿಕರನ್ನು ಸನ್ಮಾಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಗ್ರಾ.ಪಂ ಅಧ್ಯಕ್ಷ-ಉಪಾಧ್ಯಕ್ಷರು, ಸದಸ್ಯರು, ಗ್ರಾಮದ ಹಿರಿಯರು ಪಾಲ್ಗೊಂಡಿದ್ದರು.

## ಆ್ಯಂಗ್ಲೋ ಉರ್ದು ಬಾಲಕಿಯರ ಪ್ರೌಢಶಾಲೆಯಲ್ಲಿ ರಾಷ್ಟ್ರೀಯ ಶಿಕ್ಷಣ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ


ನಗರದ ಆ್ಯಂಗ್ಲೋ ಉರ್ದು ಬಾಲಕಿಯರ ಪ್ರೌಢಶಾಲೆಯಲ್ಲಿ ಮೌಲಾನಾ ಅಬುಲ್ ಕಲಾಂ ಆಜಾದರವರ ಜಯಂತಿ ನಿಮಿತ್ತ ರಾಷ್ಟ್ರೀಯ ಶಿಕ್ಷಣ ದಿನಾಚರಣೆ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಶಿಕ್ಷಕರಾದ ಜನಾಬ ಝುಡ್ ಎ.ಮುಲ್ಲಾ, ಮೌಲಾನಾ ಅಬುಲ್ ಕಲಾಂ ಆಜಾದರು ಶಿಕ್ಷಣ ತಜ್ಞರಾಗಿ, ಕವಿಗಳಾಗಿ, ಪತ್ರಿಕಾ ಸಂಪಾದಕರಾಗಿ, ರಾಜಕೀಯ ನಾಯಕರಾಗಿ ದಣಿವರಿಯದೆ ತಮ್ಮ ಪಾಲಿನ ಕರ್ತವ್ಯವನ್ನು ಪ್ರಾಮಾಣಿಕವಾಗಿ ಮಾಡಿ ಭಾರತದ ಹೆಮ್ಮೆಯ ಪುತ್ರರಾಗಿ



ಅಜರಾಮರವಾಗಿ ಉಳಿದಿದ್ದಾರೆ. ಅವರ ಆದರ್ಶಗಳನ್ನು ಎಲ್ಲರೂ ಪಾಲಿಸಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಜನಾಬ ಎಲ್.ಆರ್. ಇಟಗಿ, ಎಲ್ಲ ಶಿಕ್ಷಕರು, ಸಿಬ್ಬಂದಿ ವರ್ಗದವರು ಸೇರಿದಂತೆ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಟಿ.ಐ. ಕಾಲೇಖಾನ ಸ್ವಾಗತಿಸಿದರು. ಎಂ.ಎ. ಕಮಾನಗಾರ ನಿರೂಪಿಸಿದರು. ಜನಾಬ ಎಂ.ಎಚ್. ಜಮಾಲಸಾಬನವರ ವಂದಿಸಿದರು.

## ತರಕಾರಿ ಮಾರುಕಟ್ಟೆ ಸ್ಥಳಾಂತರಕ್ಕೆ ವಿರೋಧ



■ವಿಜಯಸಾಕ್ಷಿ ಸುದ್ದಿ, ಗದಗ

ಗಜೇಂದ್ರಗಡ ಪಟ್ಟಣದ ತರಕಾರಿ ಮಾರುಕಟ್ಟೆ ಸ್ಥಳಾಂತರವನ್ನು ವಿರೋಧಿಸಿ, ಮೊದಲು ಇದ್ದ ವಾಡೆಯ ರಸ್ತೆಯ ಡಬಲ್ ರಸ್ತೆಯಲ್ಲಿಯೇ ಪುನಃ ಪ್ರಾರಂಭಿಸಬೇಕೆಂದು ರಾಣಿ ಚನ್ನಮ್ಮ ಪಕ್ಷದ ಕರ್ನಾಟಕ ರಾಜ್ಯ ಉಪಾಧ್ಯಕ್ಷ ಪರಸಪ್ಪ ಬಿ.ಗಜ್ಜರಿ, ಗಜೇಂದ್ರಗಡ ತಾಲೂಕಾಧ್ಯಕ್ಷ ಮುತ್ತಣ್ಣ ಆರ್.ರಾಠೋಡ, ನಿಂಗನಗೌಡ ಹಾದಿಮನಿ, ಮಕ್ತುಂಸಾಬ ಯು.ನದಾಫ್ ಗದಗ ಜಿಲ್ಲಾಧಿಕಾರಿಗಳಿಗೆ ಹಾಗೂ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿ ಮಾತನಾಡಿದ ರಾಜ್ಯ ಉಪಾಧ್ಯಕ್ಷ ಪರಸಪ್ಪ ಗಜ್ಜರಿ, ಗಜೇಂದ್ರಗಡ ಪಟ್ಟಣ ವಾಡೆಯ ಡಬಲ್ ರೋಡ್‌ದಲ್ಲಿದ್ದ ಬೀದಿ ವ್ಯಾಪಾರಸ್ಥರ ತರಕಾರಿ ಮಾರುಕಟ್ಟೆಯನ್ನು ಎಪಿಎಂಸಿ ಎದುರಿಗೆ ಸ್ಥಳಾಂತರ ಮಾಡಿದ್ದು, ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿದೆ. ಈ ಹೊಸ ಸ್ಥಳಕ್ಕೆ ತೆರಳಲು ಸೂಕ್ತ ಬಸ್ ಸೌಕರ್ಯ ಇಲ್ಲ. ವ್ಯಾಪಾರಸ್ಥರಿಗೂ ಸೂಕ್ತ ಸೌಲಭ್ಯಗಳಿಲ್ಲದೇ ಅನಾನುಕೂಲವಾಗುತ್ತಿದೆ. ಹೀಗಾಗಿ, ಈ ಮೊದಲು ಇದ್ದ ಜಾಗೆಯಲ್ಲಿಯೇ ತರಕಾರಿ ವ್ಯಾಪಾರಕ್ಕೆ ಅನುವು ಮಾಡಿಕೊಡಬೇಕೆಂದು ವಿನಂತಿಸಿದರು.

ಈ ಸಂದರ್ಭದಲ್ಲಿ ರಾಜು ಮಾಂಡ್ರೆ, ಜಗನ್ನಾಥ ಸಿದ್ದಲಿಂಗಪ್ಪ, ಶರಣಪ್ಪ ಮಾಗಿ, ಯಮನೂರಪ್ಪ ಭಜಂತ್ರಿ, ಫಕ್ಕೀರಗೌಡ ರಾಮನಗೌಡ ಪಾಟೀಲ, ರಂಗಪ್ಪ ತಳ್ಳಿಹಾಳ, ಮುತ್ತಣ್ಣ ಯಲಗುಂಚಿ, ಸುರೇಶ, ಉಮೇಶ ನಾವಡೆ, ಸತೀಶ ಎಂ.ಕಳ್ಳಿ ಮುಂತಾದವರು ಉಪಸ್ಥಿತರಿದ್ದರು.

## ನಮ್ಮ ಆಚರಣೆಗಳನ್ನು ಮರೆಯಬಾರದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಆಧುನಿಕತೆ, ತಾಂತ್ರಿಕತೆಯ ಪ್ರಭಾವದಿಂದ ದೇವರು, ಧರ್ಮ, ಸಂಸ್ಕೃತಿ, ಸಂಪ್ರದಾಯ, ಹಬ್ಬ, ಆಚರಣೆಗಳು ಮರೆಯಾಗದಿರಲಿ. ಧಾರ್ಮಿಕ ಕಾರ್ಯಾಕ್ರಮಗಳು ಮತ್ತು ಜಾತ್ರಾ ಮಹೋತ್ಸವಗಳು ಮನುಷ್ಯನನ್ನು ಸನ್ಮಾರ್ಗಕ್ಕೆ ಕೊಂಡ್ಯೊಯುವ ವೇದಿಕೆಗಳಾಗಿವೆ ಎಂದು ಶಿರಹಟ್ಟಿಯ ಜ. ಫಕ್ಕೀರೇಶ್ವರ ಸಂಸ್ಥಾನಮಠದ ಜ. ಫಕೀರ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಅವರು ಭಾನುವಾರ ತಾಲೂಕಿನ ಗೊಜನೂರ ಗ್ರಾಮದಲ್ಲಿ ನಡೆದ ಶ್ರೀ ಗಾಳೆಮ್ಮದೇವಿ ಜಾತ್ರಾ ಮಹೋತ್ಸವ ಮತ್ತು ಧರ್ಮಸಭೆಯ ಸಾನ್ನಿಧ್ಯವಹಿಸಿ ಆಶೀರ್ವಚನ ನೀಡುತ್ತಿದ್ದರು.

ತಂದೆ-ತಾಯಿ, ಗುರುಗಳು ದೇವರ ಸಮಾನ. ಅವರು ನಮಗೆ ಧಾರೆಯೆರೆದಿರುವ ಸಂಸ್ಕಾರ, ಪ್ರೀತಿ,



ವಿಶ್ವಾಸ, ತ್ಯಾಗಕ್ಕೆ ಸಮನಾದುದು ಯಾವುದೂ ಇಲ್ಲ. ವಿಜ್ಞಾನ ಎಷ್ಟೇ ಪ್ರಗತಿ ಸಾಧಿಸಿದ್ದರೂ ನಮ್ಮ ಸಂಪ್ರದಾಯ, ಸಂಸ್ಕೃತಿ, ಆಚರಣೆಗಳನ್ನು ಮರೆಯಬಾರದು. ಆಧ್ಯಾತ್ಮವನ್ನು ಬದುಕಿಗೆ ಹೊಂದಿಸಿಕೊಳ್ಳಬೇಕು. ಸಾರ್ಥಕ ಬದುಕಿಗೆ ಪರಸ್ಪರ ಸ್ನೇಹ, ಪ್ರೀತಿ, ಸಹಾಯ ರೂಢಿಸಿಕೊಳ್ಳಬೇಕು. ಮನುಷ್ಯನ ಬದುಕು ಮೌಲ್ಯಯುತ ಮತ್ತು ಸ್ಮರಣೀಯವಾಗಿರಲು ಧರ್ಮದ ತಳಹದಿಯಲ್ಲಿ ಸಾಗಬೇಕು. ನಿತ್ಯ ಜೀವನದ ಕಾಯಕದೊಂದಿಗೆ ಪ್ರತಿಯೊಬ್ಬರೂ ಶಿಕ್ಷಣ, ಆರೋಗ್ಯ, ಪ್ರಸಾದ ಸೇರಿ ಧರ್ಮ ಕಾರ್ಯಗಳಿಗೆ ಕೈಲಾದಮಟ್ಟಿನ ಸಹಾಯ ಸಹಕಾರ ನೀಡಿ ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳಬೇಕು. ಶರಣರು, ಸಂತರು, ಸೂಫಿಗಳು, ಮಹಾತ್ಮರು ಸಮಾಜದ ಮಾರ್ಗದರ್ಶಕರಾಗಿದ್ದು, ಅವರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ನಡೆದಾಗ ಮಾತ್ರ ಬದುಕು ಸಾರ್ಥಕತೆ ಹೊಂದುತ್ತದೆ ಎಂದು ಹೇಳಿದರು. ಧರ್ಮಸಭೆಯ ಬಳಿಕ ಭಾರೀ ಸವಾಲ್-ಜವಾಬ್ ಭಜನಾ ಸ್ಪರ್ಧೆ ನಡೆಯಿತು.

ಕಾರ್ಯಕ್ರಮದಲ್ಲಿ ಗ್ರಾಮದ ಹಿರಿಯರು, ಗ್ರಾ.ಪಂ ಸರ್ವ ಸದಸ್ಯರು, ಭಕ್ತರು, ದೇವಸ್ಥಾನ ಕಮಿಟಿಯವರು ಪಾಲ್ಗೊಂಡಿದ್ದರು.




ಗದುಗಿನ ಆ್ಯಂಗ್ಲೋ ಉರ್ದು ಬಾಲಕರ ಪ್ರೌಢಶಾಲೆಯಲ್ಲಿ ಮೌಲಾನಾ ಅಬುಲ್ ಕಲಾಂ ಆಜಾದರವರ ಜಯಂತಿ ನಿಮಿತ್ತ ರಾಷ್ಟ್ರೀಯ ಶಿಕ್ಷಣ ದಿನಾಚರಣೆ ಆಚರಿಸಲಾಯಿತು. ಶಿಕ್ಷಕರಾದ ಎಂ.ಎಂ. ಪೀರಜಾದೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಪ್ರೌಢಶಾಲೆಯ ಮುಖ್ಯಾಧ್ಯಾಪಕಿ ನಾಸೀರ ಎ.ನವಲಗುಂದ, ಎಲ್ಲ ಶಿಕ್ಷಕರು, ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಎಂ.ಎ. ರಿಕಾರಟಿ ಸ್ವಾಗತಿಸಿದರು. ಶಿಕ್ಷಕ ಎಫ್.ಎಂ. ಢಾಲಾಯತ ನಿರೂಪಿಸಿದರು. ಎಸ್.ಐ. ನದಾಫ್ ವಂದಿಸಿದರು.

'ತೋಟಗಾರಿಕೆ ಕ್ಷೇತ್ರದಲ್ಲಿ ಉದ್ಯಮಶೀಲತೆ ಅವಕಾಶಗಳು' ಕುರಿತು ತರಬೇತಿ ಕಾರ್ಯಕ್ರಮ

# ತೋಟಗಾರಿಕಾ ಕೌಶಲ್ಯಗಳನ್ನು ಅಭ್ಯಸಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಐ.ಸಿ.ಎ.ಆರ್-ಗೇರು ಸಂಶೋಧನಾ ನಿರ್ದೇಶನಾಲಯ ಪುತ್ತೂರು ಹಾಗೂ ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಹುಲಕೋಟಿ ಇವರ ಸಹಯೋಗದಲ್ಲಿ ಪರಿಶಿಷ್ಟ ಜಾತಿ ಉಪ ಯೋಜನೆಯಡಿ 'ಗ್ರಾಮೀಣ ಯುವಕರಿಗೆ ತೋಟಗಾರಿ-ಕೆ ಕ್ಷೇತ್ರದಲ್ಲಿ ಉದ್ಯಮಶೀಲತೆ ಅವಕಾಶಗಳು' ಕುರಿತು ತರಬೇತಿ ಕಾರ್ಯಕ್ರಮವನ್ನು ಹುಲಕೋಟಿಯ ಕೃಷಿ ವಿಜ್ಞಾನ ಕೇಂದ್ರದಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿದ ವಿಜ್ಞಾನಿ ಡಾ. ಮಂಜೇಶ ಜಿ.ಎನ್, ಆಹಾರ ಉತ್ಪಾದನೆಯಲ್ಲಿ ಕ್ಷೇತ್ರ ಬೆಳೆಗಳಿಗೆ ಹೋಲಿಸಿದರೆ ತೋಟಗಾರಿಕೆ ಬೆಳೆಗಳ ಪಾತ್ರ ಮಹತ್ವದಾಗಿದ್ದು, ಯುವಕರು ತೋಟಗಾರಿಕಾ ಕೌಶಲ್ಯಗಳಾದ ಕಸಿ ಕಟ್ಟುವುದು, ಚಾಟನಿ ಮಾಡುವುದು, ಗಾರ್ಡನ್ ನಿರ್ವಹಣೆ, ತೋಟದ ನಿರ್ವಹಣೆ ಮುಂತಾದವುಗಳನ್ನು ಕಲಿತರೆ ಸ್ವಂತ ಉದ್ಯೋಗ ಸ್ಥಾಪಿಸುವುದು ಸರಳವಾಗುತ್ತದೆ ಎಂದು ತಿಳಿಸಿದರು.

ಅತಿಥಿಗಳಾಗಿ ಆಗಮಿಸಿದ್ದ ಡಾ. ವೀಣಾ



ಜಿ.ಎಲ್. ಗೋಡಂಬಿ ಹಣ್ಣಿನ ಸಂಸ್ಕರಣೆ ಮತ್ತು ಮೌಲ್ಯವರ್ಧನೆಯಿಂದ ಸ್ವ-ಉದ್ಯೋಗ ಮಾಡಲು ಸಾಕಷ್ಟು ಅವಕಾಶಗಳಿವೆ ಎಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಸಲಹೆಗಾರ ಡಾ. ಎಲ್. ಜಿ. ಹಿರೇಗೌಡರ್ ಮಾತನಾಡಿ, ಗದಗ ಜಿಲ್ಲೆಯ ಮಳೆಯಾಶ್ರಿತ ಕೆಂಪು ಜಮೀನುಗಳಲ್ಲಿ ಗೋಡಂಬಿ ಬೆಳೆ ಉತ್ತಮವಾಗಿ ಬೆಳೆದು ಇಳುವರಿಯನ್ನು ಕೊಡುತ್ತಿದೆ. ಗದಗ ಜಿಲ್ಲೆಯಲ್ಲಿ ಸುಮಾರು 500 ಹೆಕ್ಟೇರ್ ಪ್ರದೇಶದಲ್ಲಿ ಗೋಡಂಬಿಯನ್ನು ಬೆಳೆಯುತ್ತಿದ್ದು, ಇದಕ್ಕೆ ಸಹಾಯ ಮಾಡಿದ ಗೋಡಂಬಿ ಮತ್ತು ಕೊಕೊ ನಿರ್ದೇಶನಾಲಯ ಕೊಚ್ಚಿನ್ ಹಾಗೂ ಗೇರು ಸಂಶೋಧನಾ ನಿರ್ದೇಶನಾಲಯ, ಪುತ್ತೂರು ಇವರಿಗೆ ಧನ್ಯವಾದಗಳನ್ನು ತಿಳಿಸಿದರು.

ಉದ್ಘಾಟನೆಯ ನಂತರ 3 ದಿನಗಳ ಕಾಲ ತೋಟಗಾರಿಕೆಯಲ್ಲಿ ಉದ್ಯಮಶೀಲತೆ ಕುರಿತು ತಾಂತ್ರಿಕ ಅಧಿವೇಶನಗಳಲ್ಲಿ ಮಾಹಿತಿಯನ್ನು ನೀಡಲಾಯಿತು. ಪ್ರಾದೇಶಿಕ ತೋಟಗಾರಿಕಾ ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರ, ಕುಂಬಾಪುರ ಫಾರ್ಮ್, ಕೃಷಿ ವಿಶ್ವವಿದ್ಯಾಲಯ ಧಾರವಾಡದ ಹೈ-ಟೆಕ್ ಹಾರ್ಟಿಕಲ್ಚರ್ ಯುನಿಟ್ ಹಾಗೂ ಸಂರಕ್ಷಿತ ಕೃಷಿ ಪ್ರಾತ್ಯಕ್ಷಿಕೆ ಘಟಕಗಳಿಗೆ ಮತ್ತು ಕೃಷಿ ವಿಜ್ಞಾನ ಕೇಂದ್ರ, ಧಾರವಾಡದ ಹಣ್ಣಿನ ನರ್ಸರಿಗೆ ಕ್ಷೇತ್ರ ಭೇಟಿಗಳನ್ನು ಏರ್ಪಡಿಸಲಾಯಿತು.

ಹೇಮಾವತಿ ಹಿರೇಗೌಡರ್ ತರಬೇತಿಯ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ಡಾ. ವಿನಾಯಕ ನಿರಂಜನ್ ಕಾರ್ಯಕ್ರಮ ನಿರೂಪಿಸಿದರು. ಎನ್.ಎಚ್. ಭಂಡಿ ವಂದಿಸಿದರು. 25 ಜನ ಪರಿಶಿಷ್ಟ ಜಾತಿಯ ಯುವಕರು ಈ ತರಬೇತಿಯಲ್ಲಿ ಭಾಗವಹಿಸಿ ಮಾಹಿತಿಯನ್ನು ಪಡೆದುಕೊಂಡರು. ತರಬೇತಿಯ ಕೊನೆಯಲ್ಲಿ ಶಿಬಿರಾರ್ಥಿಗಳಿಗೆ ಪ್ರಮಾಣಪತ್ರಗಳನ್ನು ನೀಡಲಾಯಿತು.



ಗದಗ-ಬೆಟಗೇರಿ ನಗರಸಭೆಯ ಅಧಿಕಾರಿಗಳು ಅವಳಿ ನಗರದಲ್ಲಿ ನೀರಿನ ಕರ ಬಾಕಿ ಉಳಿಸಿಕೊಂಡಿರುವವರ ಹಾಗೂ ಅನಧಿಕೃತ ಸಂಪರ್ಕ ಹೊಂದಿದವರ ನಳಗಳನ್ನು ಬಂದ್ ಮಾಡುವ ಪ್ರಕ್ರಿಯೆಗೆ ಸೋಮವಾರ ಚಾಲನೆ ನೀಡಿದರು.

### ಸರ್ಕಾರಿ ನೌಕರರ ಸಂಘದ ಮುಂಡರಗಿ ತಾಲೂಕು ಶಾಖೆಯ ಪದಾಧಿಕಾರಿಗಳ ಚುನಾವಣೆ

# ಅಧ್ಯಕ್ಷರಾಗಿ ನಾಗರಾಜ ಹಳ್ಳಿಕೇರಿ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಮುಂಡರಗಿ ತಾಲೂಕು ಶಾಖೆಯ ಪದಾಧಿಕಾರಿಗಳ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಪ್ರೌಢಶಾಲಾ ಶಿಕ್ಷಕ ನಾಗರಾಜ ಹಳ್ಳಿಕೇರಿ, ರಾಜ್ಯ ಪರಿಷತ್ ಸದಸ್ಯರಾಗಿ ಆರೋಗ್ಯ ಇಲಾಖೆಯ ಮಲ್ಲಿಕಾರ್ಜುನ ಕಲಕಂಬಿ, ಖಜಾಂಚಿಯಾಗಿ ಕೃಷಿ ಇಲಾಖೆಯ ಶ್ರೀಧರ ದಾನಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾ ಅಧಿಕಾರಿ ವಿ.ಎ. ರೋಣದ ತಿಳಿಸಿದ್ದಾರೆ.

ಅಧ್ಯಕ್ಷ, ರಾಜ್ಯಪರಿಷತ್ ಸದಸ್ಯ, ಹಾಗೂ ಖಜಾಂಚಿ ಸ್ಥಾನಗಳಿಗೆ ನಾಮಪತ್ರ ಸಲ್ಲಿಸಲು ನ.7 ಕೊನೆಯ ದಿನವಾಗಿತ್ತು. ನ.8ರಂದು ನಾಮಪತ್ರ ಪರಿಶೀಲನೆ ನಡೆಸಿ, ಮೂರು ಸ್ಥಾನಗಳಿಗೆ ತಲಾ ಒಬ್ಬ ಅಭ್ಯರ್ಥಿ ನಾಮಪತ್ರ ಸಲ್ಲಿಸಿದ್ದರಿಂದ ಚುನಾವಣಾ ಅಧಿಕಾರಿಗಳು ಅಧಿಕೃತವಾಗಿ ಅವಿರೋಧ ಆಯ್ಕೆಯನ್ನು ಘೋಷಿಸಿ, ಪ್ರಮಾಣಪತ್ರ ವಿತರಿಸಿದರು.

ಈ ಸಂದರ್ಭದಲ್ಲಿ ನೂತನವಾಗಿ ಆಯ್ಕೆಯಾಗಿರುವ ನಿರ್ದೇಶಕರು, ವಿವಿಧ ಇಲಾಖೆಗಳ ವೃಂದ ಸಂಘಗಳ ಅಧ್ಯಕ್ಷರು, ವಿವಿಧ ಇಲಾಖೆಯ ನೌಕರರು ಪಾಲ್ಗೊಂಡು ಶುಭಾಶಯ ಕೋರಿದರು.







ನೂತನವಾಗಿ ಆಯ್ಕೆಯಾದ ನಿರ್ದೇಶಕರಾದ ನಾಗೇಂದ್ರ ಪಟ್ಟಣಶೆಟ್ಟಿ, ರಾಘವೇಂದ್ರ ಜೆ, ಬಸವಣ್ಣೆಪ್ಪ ಜಿ.ಬಿ, ಫಕೀರಸಾಬ ಕಲಕೇರಿ, ಶಂಕರ ಸರ್ವದೆ, ಜಗದೀಶ ಎ, ಮಹೇಶ ಅಲ್ಲಿಪುರ, ವಿ.ಎನ್. ಪೂಜಾರ, ಮೈಲಾರಪ್ಪ, ಮೃತ್ಯುಂಜಯ ವಿಭೂತಿ, ಎಸ್.ಎಸ್. ಮೇಟಿ, ವಾಯ್. ಎಸ್. ದಡವಾಡ, ಮಹಾಂತೇಶ ಹಲವಾಗಲಿ, ಮುದುಕಪ್ಪ ಸಂಸಿ, ಮಲ್ಲಿಕಾರ್ಜುನ ಬಾರಕೇರ, ವಿಠಲ ನಾವಳ್ಳಿ, ಹನುಮಂತ ಹಳ್ಳಿ, ಕಾಳಪ್ಪ ಬಡಿಗೇರ, ಎಂ.ಕೆ. ಸ್ವಾಮಿ, ಮಲ್ಲಿಕಾರ್ಜುನ ಹಿರೇಗೌಡರ, ಬಿ.ಕೆ. ಸಂಜೀವಪ್ಪನವರ, ಜಗದೀಶ ಗುಳ್ಳಾರಿ, ಹನುಮಂತಪ್ಪ ಹುಡೆದ, ಮೌಲಾಸಾಬ ಬನ್ನಿಕೊಪ್ಪ, ಎ.ಎಸ್. ಪಾಟೀಲ, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಎಸ್.ಸಿ. ಹರ್ತಿ, ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರ ಸಂಘದ ಅಧ್ಯಕ್ಷ ಎ.ಡಿ. ಬಂಡಿ, ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಕೆ.ಎಂ. ಮಾಯಮ್ಮನವರ, ಮಾಧ್ಯಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಡಿ.ಜಿ. ಪೂಜಾರ, ಸಂತೋಷ ಅಂಗಡಿ, ಶಿವಮೂರ್ತಿ ನಾಯಕ್, ಹನುಮಂತಪ್ಪ, ಆರ್.ಸಿ. ಪಟ್ಟೇದ, ಕಾಶೀನಾಥ ಶಿರಬಡಗಿ, ಎನ್.ಎಮ್. ಕುಕನೂರ, ಎಂ.ಪಿ. ಶೀರನಳ್ಳಿ, ಎಂ.ಎಂ. ಬಂಡಿ, ರಾಘವೇಂದ್ರ ಗುಡಗೂರ, ಮನೋಹರ ಎಸ್, ಹುಸೇನ ಕವಲೂರ, ಎಂ.ಬಿ. ಮೇಟಿ, ಭೋಜು ಲಮಾಣಿ, ಎಂ.ಎಸ್. ಶೀರನಳ್ಳಿ, ಖಾದರ ಭೋಪದಾರ, ಎ.ಎಮ್. ಪೂಜಾರ, ಎಲ್.ಎನ್. ದೊಡ್ಡಮನಿ, ರವಿ ದೇವರಡ್ಡಿ, ಮಲ್ಲಪ್ಪ, ಸೇರಿದಂತೆ ವಿವಿಧ ಇಲಾಖೆಯ ನೌಕರರು ಹಾಜರಿದ್ದರು.


ನೂತನವಾಗಿ ಆಯ್ಕೆಯಾದ ಅಧ್ಯಕ್ಷ ನಾಗರಾಜ ಹಳ್ಳಿಕೇರಿ ಮಾತನಾಡಿ, ನೌಕರರ ವಿವಿಧ ಸಮಸ್ಯೆಗಳನ್ನು ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ತಿಳಿಸಿ, ತಾಲೂಕಿನಲ್ಲಿ ಸುಸಜ್ಜಿತವಾದ ನೌಕರ ಭವನ ನಿರ್ಮಾಣ ಮಾಡಲು ಮೊದಲ ಆದ್ಯತೆಯನ್ನು ನೀಡಲಾಗುವುದು ಎಂದರಲ್ಲದೆ, ತಮ್ಮ ಆಯ್ಕೆಗೆ ಬೆಂಬಲಿಸಿದ ನಿರ್ದೇಶಕರಿಗೆ, ಎಲ್ಲ ಇಲಾಖೆಗಳ ವೃಂದ ಸಂಘಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳಿಗೆ, ಅಧಿಕಾರಿಗಳಿಗೆ, ನೌಕರರಿಗೆ ಧನ್ಯವಾದಗಳನ್ನು ತಿಳಿಸಿದರು.

# ವಕ್ಫ್ ಕಾಯ್ದೆ ರದ್ದುಪಡಿಸಲು ರೈತರಿಂದ ಮನವಿ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಇಡೀ ವಕ್ಫ್ ಕಾಯ್ದೆಯನ್ನು ರದ್ದುಪಡಿಸುವ ಮೂಲಕ ದೇಶದ ರೈತರು ನೆಮ್ಮದಿಯ ಜೀವನ ನಡೆಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಭಾರತೀಯ ಕಿಸಾನ್ ಸಂಘದ ತಾಲೂಕಾ ಘಟಕದ ವತಿಯಿಂದ ತಹಸೀಲ್ದಾರರ ಮೂಲಕ ಸೋಮವಾರ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಮುಖಂಡ ನಾಗರಾಜ ಕುಲಕರ್ಣಿ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಮೇಶ ಕೋಳಿವಾಡ, ರೈತರ ಜಮೀನುಗಳ, ಮಠ, ಮಂದಿರಗಳ ಆಸ್ತಿ ದಾಖಲೆಗಳಲ್ಲಿ ಪಹಣಿಯ ಕಾಲಂ ನಂ. 11ರಲ್ಲಿ ವಕ್ಫ್ ಬೋರ್ಡ್ ಆಸ್ತಿಯೆಂದು ನಮೂದಿಸಿರುವುದನ್ನು ತಕ್ಷಣವೇ ತೆಗೆದು ಹಾಕಬೇಕು. ದೇಶದ ರೈತರ




ಜಮೀನುಗಳನ್ನು ನುಂಗಿ ಬೀದಿಗೆ ತಳ್ಳಲು ಹೊಂಚು ಹಾಕಿರುವ ವಕ್ಫ್ ಬೋರ್ಡ್ ರೈತರಿಗೆ ಮೋಸ ಮಾಡುತ್ತಿದೆ ಎಂದರು.

ಸಂಘಟನೆಯ ಜಿಲ್ಲಾ ಉಪಾಧ್ಯಕ್ಷ ಟಾಕಪ್ಪ ಸಾತಪುತೆ ಮಾತನಾಡಿ, ವಕ್ಫ್ ಬೋರ್ಡ್ ಮಾಡುತ್ತಿರುವ ಲ್ಯಾಂಡ್ ಜಿಹಾದ್‌ನಿಂದ ಜಗತ್ತಿಗೆ ಅನ್ನ ನೀಡುವ ರೈತರು ಕಂಗಾಲಾಗಿ ಹೋಗಿದ್ದಾರೆ. ಜಿಲ್ಲೆಯ ಬಹುತೇಕ ತಾಲೂಕುಗಳಲ್ಲಿ ಸಾಕಷ್ಟು ಆಸ್ತಿಗಳು ಈಗಾಗಲೇ ವಕ್ಫ್ ಬೋರ್ಡ್ ಕೈವಶವಾಗಿವೆ. ಇದಕ್ಕೆಲ್ಲ ಸರ್ಕಾರವೇ ಹೊಣೆಯಾಗಿದೆ ಎಂದರು.

ಭಾರತೀಯ ಕಿಸಾನ್ ಸಂಘದ ಶಿರಹಟ್ಟಿ ತಾಲೂಕಾ ಘಟಕದ ಅಧ್ಯಕ್ಷ ಶಂಕರಗೌಡ ಪಾಟೀಲ, ಅಜಯ ಕರಿಗೌಡ್ರ, ವಸಂತಗೌಡ ಕರಿಗೌಡ್ರ, ಗಂಗಪ್ಪ ಛಬ್ಬಿ, ಬಸವರಾಜ ಬೆಂತೂರ, ಮಂಜುನಾಥ ಮಟ್ಟಿ, ಈರಪ್ಪ ತಳವಾರ, ಮೌನೇಶ ಗೌಳಿ, ಫಕ್ಕೀರೇಶ ಬಕ್ಕಸದ, ಫಕ್ಕೀರೇಶ ಕಲ್ಲಪ್ಪನವರ, ಅಶೋಕ ಮುಳಗುಂದ, ಶಿವಲಿಂಗಪ್ಪ ಕೋಡಿ, ಲಕ್ಷ್ಮಣ ಬೇರಗಣ್ಣವರ, ರಮೇಶ ವಾಲಿಕಾರ ಸೇರಿ ಅನೇಕ ರೈತರು ಉಪಸ್ಥಿತರಿದ್ದರು.

# ಅಕ್ರಮ ಮರಳು ಸಾಗಾಟ ನಿಯಂತ್ರಿಸಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕು ವ್ಯಾಪ್ತಿಯ ಅಕ್ಕಿಗುಂದ, ಬಟ್ಟೂರ, ಬಡ್ನಿ, ಅಮರಾಪೂರ, ಹುಲ್ಲೂರು, ಅದರಹಳ್ಳಿ, ಕೊಗನೂರ ಗ್ರಾಮ ವ್ಯಾಪ್ತಿಯ ಸರ್ಕಾರಿ ಹಳ್ಳ, ಮಾಲ್ಕೀ ಜಮೀನಿನಲ್ಲಿ ಮರಳು ಅಕ್ರಮ ಗಣಿಗಾರಿಕೆ, ಸಾಗಾಟ ದಂಧೆ ಅವ್ಯಾಹತವಾಗಿ ನಡೆಯುತ್ತಿದ್ದು, ಇದನ್ನು ತಡೆಯಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ಜಿಲ್ಲಾಧ್ಯಕ್ಷ ಶರಣು ಗೋಡಿ ನೇತೃತ್ವದಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ ಅವರಿಗೆ ಸೋಮವಾರ ಮನವಿ ಸಲ್ಲಿಸಲಾಯಿತು.

ತಾಲೂಕಿನಲ್ಲಿ ಮರಳು ಅಕ್ರಮ ಸಾಗಾಟ ದಂಧೆ ಅವ್ಯಾಹತವಾಗಿ ನಡೆಯುತ್ತಿದೆ. ಮರಳು ಸಾಗಿಸುವ ಟಿಪ್ಪರ್ ಮತ್ತು ಲಾರಿಗಳು ಪಾಸ್ ತೆಗೆದುಕೊಂಡರೂ ಒಂದೇ




ಪಾಸ್‌ನಲ್ಲಿ ಎಲ್ಲೆಂದರಲ್ಲಿಗೆ ನಾಲ್ಕೈದು ಬಾರಿ ಮರಳು ಸಾಗಾಟ ಮಾಡುತ್ತಿದ್ದಾರೆ. ಲಾರಿ ಮತ್ತು ಟಿಪ್ಪರ್‌ಗಳಿಗೆ ಜಿಪಿಎಸ್ ಇದ್ದರೂ ಸಹ ನಂಬಂಧಪಟ್ಟ ಇಲಾಖೆಯ ಅಧಿಕಾರಿಗಳ ಕಣ್ಣು ತಪ್ಪಿಸಿ ಜಿಪಿಎಸ್ ಬಂದ್ ಮಾಡಿ ಮರಳು ಗುತ್ತಿಗೆದಾರರ ಜೊತೆ ಹೊಂದಾಣಿಕೆಯಾಗಿ ಸಕ್ರಮದ ಜೊತೆ ಅಕ್ರಮ ಮರಳು ಸಾಗಣೆ ಮಾಡಿ ಸರ್ಕಾರದ ಬೊಕ್ಕಸಕ್ಕೆ ನಷ್ಟ ಮಾಡುತ್ತಿದ್ದಾರೆ. ಮರಳು ದಂಧೆ-ಕೋರರ ಮೇಲೆ ಸೂಕ್ತ ಕಾನೂನು ಕ್ರಮವನ್ನು ಜರುಗಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಕರವೇ ಸ್ವಾಭಿಮಾನಿ ಸೇನೆ ತಾಲೂಕಾಧ್ಯಕ್ಷ ನಾಗೇಶ ಅಮರಾಪುರ, ಜಿಲ್ಲಾ ಕಾರ್ಯಾಧ್ಯಕ್ಷ ಇಸ್ಮಾಯಿಲ್ ಆಡೂರ, ಪ್ರವೀಣ ಆಚಾರಿ, ಯಲ್ಲಪ್ಪ ಹಂಜಗಿ, ಅಷ್ಫಾಕ ಬಾಗೋಡಿ, ಕೈಸರ ಮಹಮ್ಮದ ಅಲಿ, ಅಭಿಷೇಕ ಸಾತಪುತೆ, ದುದ್ದು ಅಕ್ಕಿ, ನಾಸೀರ ಸಿದ್ದಿ, ಸುಲೇಮಾನ ಬಾರಿಗಿಡದ, ಮುಕ್ತಿಯಾರ ಜಮಖಂಡಿ, ನದಿಮ್ ಕುಂದಗೋಳ ಸೇರಿದಂತೆ ಅನೇಕ ಕಾರ್ಯಕರ್ತರು ಇದ್ದರು.

# ವಿದ್ಯಾರ್ಥಿಗಳಿಗೆ ಕಾನೂನು ಅರಿವು ಅಗತ್ಯ




**■ವಿಜಯಸಾಕ್ಷಿ ಸುದ್ದಿ, ಗದಗ**

ಶಹರದ ಸಿದ್ದಲಿಂಗೇಶ್ವರ ನಗರದಲ್ಲಿರುವ ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಸೋಮವಾರ ಸ್ಥಳೀಯ ಕೆ.ಎಲ್.ಇ ಸಂಸ್ಥೆಯ ಎಸ್.ಎ ಮಾನ್ವಿ ಕಾನೂನು ಮಹಾವಿದ್ಯಾಲಯದ ಕಾನೂನು ಅರಿವು ಘಟಕದ ಮುಖ್ಯಸ್ಥರಾದ ಡಾ.ಜ್ಯೋತಿ ಸಿ.ವಿ ಇವರ ಮಾರ್ಗದರ್ಶನದಲ್ಲಿ ದ್ವಿತೀಯ ವರ್ಷದ ವಿದ್ಯಾರ್ಥಿಗಳಾಣಟಿಜಜಜಿಟಿಜಜ ಸುಮಾ ಘಟ್ಟಿ, ವಿರೇಶ ಚುರ್ಚಿಹಾಳ, ಸುಷ್ಮಾ ಗೊಬ್ಬರಗುಂಪಿ, ಶಂಕ್ರಪ್ಪ ವಡ್ಡರ ವಿವಿಧ ಕಾನೂನುಗಳ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯರು ಅಧ್ಯಕ್ಷತೆ ವಹಿಸಿದ್ದರು. ಉಪನ್ಯಾಸಕ ವರ್ಗ ಇದ್ದರು.

### ಡಾ. ಎಂ.ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದಿಂದ ಕಾರ್ಯಕ್ರಮ

# ರಾಜ್ಯ ಮಟ್ಟದ ವಿಚಾರ ಸಂಕಿರಣ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಡಾ. ಎಂ.ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನ ಧಾರವಾಡ ಹಾಗೂ ಕೆ.ಎಲ್.ಇ. ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ, ಜಗದ್ಗುರು ತೆ-ೂಂಟದಾರ್ಯ ಮಹಾವಿದ್ಯಾಲಯ, ಗದಗ ಕನ್ನಡ ವಿಭಾಗಗಳ ಸಂಯುಕ್ತ ಆಶ್ರಯದಲ್ಲಿ ಡಾ. ಎಂ.ಎಂ. ಕಲಬುರ್ಗಿಯವರ ಸೃಜನ ಸಾಹಿತ್ಯ ಕುರಿತು ರಾಜ್ಯ ಮಟ್ಟದ ವಿಚಾರ ಸಂಕಿರಣವು ನ. 12ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜೆ.ಟಿ. ಮಹಾವಿದ್ಯಾಲಯದ ಸಭಾಂಗಣದಲ್ಲಿ ಜರುಗಲಿದೆ.

ಧಾರವಾಡದ ಎಂ.ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದ ಸದಸ್ಯರಾದ ಪ್ರೊ. ಚಂದ್ರಶೇಖರ ವಸ್ತ್ರದ ಅವರು ಆಶಯ ನುಡಿಗಳನ್ನಾಡುವರು. ಕಾರ್ಯಕ್ರಮದ ಗೌರವ ಉಪಸ್ಥಿತಿಯನ್ನು ಕೆ.ಎಲ್.ಇ. ಸಂಸ್ಥೆಯ ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯದ ಸ್ಥಾನಿಕ ಮಂಡಳಿಯ ಕಾರ್ಯಾಧ್ಯಕ್ಷ ಎಸ್.ಪಿ. ಸಂಶಿಮಠ, ಕೆ.ಎಲ್.ಇ. ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಸ್ಥಾನಿಕ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷರಾದ ರಜನಿ ಪಾಟೀಲ, ಕೆ.ಎಲ್.ಇ ಸಂಸ್ಥೆಯ ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯದ ಪ್ರಾಚಾರ್ಯರಾದ ಪ್ರೊ. ಪಿ.ಜಿ. ಪಾಟೀಲ, ಕೆ.ಎಲ್.ಇ. ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಎ.ಕೆ. ಮಠ ವಹಿಸುವರು.

ಮುಳಗುಂದ ಸ.ಪ್ರ.ದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ರಮೇಶಗೌಡ ಕಲ್ಲನಗೌಡರ ನಾಟಕ 'ಕೆಟ್ಟಿತ್ತು ಕಲ್ಯಾಣ' ಕುರಿತು, ಹುಬ್ಬಳ್ಳಿಯ ಸ.ಪ್ರ.ದ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ. ವೈ.ಎಂ. ಭಜಂತ್ರಿ ಕಾವ್ಯ: 'ನೀರು ನೀರಡಿಸಿತ್ತು' ಕುರಿತು ವಿಚಾರ ಗೋಷ್ಠಿ ನಡೆಸುವರು.

ಧಾರವಾಡ ಡಾ. ಎಂ.ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದ ಅಧ್ಯಕ್ಷ ಡಾ.ವೀರಣ್ಣ ರಾಜೂರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಯುವ ಕಲಾವಿದರಾದ ವಿಜಯ ಸುತಾರ ವಚನ ಸಂಗೀತ ಪ್ರಸ್ತುತಪಡಿಸುವರು.

ಪ್ರತಿಷ್ಠಾನದ ಸದಸ್ಯ ಕಾರ್ಯದರ್ಶಿ ಕುಮಾರ ಬೆಕ್ಕೇರಿ, ಡಾ.ಅಂದಯ್ಯ ಅವಟಗಿಮಠ, ಮುಖ್ಯಸ್ಥರಾದ ಪ್ರೊ. ವಿಶ್ವನಾಥ ಜಿ ಹಾಗೂ ಸದಸ್ಯರು ಸರ್ವರಿಗೂ ಸ್ವಾಗತ ಕೋರಿದ್ದಾರೆ.

### ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನಲ್ಲಿ 'ರಾಷ್ಟ್ರೀಯ ಶಿಕ್ಷಣ ದಿನಾಚರಣೆ'

# ಆಜಾದರ ಆದರ್ಶಗಳು ವಿದ್ಯಾರ್ಥಿಗಳಿಗೆ ಪ್ರೇರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತ ದೇಶದ ಮೊದಲ ಶಿಕ್ಷಣ ಸಚಿವರಾದ ಮೌಲಾನಾ ಆಜಾದ್ ಅವರ ಜನ್ಮದಿನದ ನಿಮಿತ್ತ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನಲ್ಲಿ ಸೋಮವಾರ ರಾಷ್ಟ್ರೀಯ ಶಿಕ್ಷಣ ದಿನವನ್ನು ಆಚರಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಪ್ರಾಂಶುಪಾಲ ಡಾ. ಎಮ್.ಎಮ್. ಅವಟಿ ಮಾತನಾಡಿ, ಮೌಲಾನಾ ಆಜಾದ್ ಅವರ ಆದರ್ಶಗಳು ಮತ್ತು ಶಿಕ್ಷಣ ಕ್ಷೇತ್ರಕ್ಕೆ ಅವರ ಕೊಡುಗೆಗಳು ಪ್ರತಿ ವಿದ್ಯಾರ್ಥಿ ಮತ್ತು ಶಿಕ್ಷಕರಿಗೆ ಪ್ರೇರಣೆಯಾಗಿದೆ.




ಭಾರತದಲ್ಲಿ ಸಮಾನತೆ, ಸರ್ವತೋಮುಖ ಪ್ರಗತಿ ಮತ್ತು ಸಾಮಾಜಿಕ ಶ್ರೇಯಸ್ಸಿಗಾಗಿ ಶಿಕ್ಷಣದ ಅವಶ್ಯಕತೆಯನ್ನು ಅವರು ಪ್ರಮುಖವಾಗಿ ಮನದಟ್ಟು ಮಾಡಿದರು ಎಂದರು.

ವಿದ್ಯಾರ್ಥಿಗಳಿಗಾಗಿ ಪ್ರೊ. ಮಲ್ಲಿಕಾರ್ಜುನ ಜಿ.ಡಿ. ಮತ್ತು ಪ್ರೊ. ತೆಹಸಿನ್ ಶಿಗ್ಗಿ ಅವರು ಆಯೋಜಿಸಿದ್ದ ವಿಶೇಷ ಕಾರ್ಯಕ್ರಮದಲ್ಲಿ, ಆಜಾದ್ ಅವರ ಜೀವನದ ಘಟ್ಟಗಳು ಮತ್ತು ಶಿಕ್ಷಣ ಕುರಿತ ಅವರ ವಿಶಿಷ್ಟ ಚಿಂತನೆಗಳನ್ನು ಹಂಚಿಕೊಳ್ಳಲಾಯಿತು. ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ, ಶಿಕ್ಷಣದ ಪ್ರಾಮುಖ್ಯತೆ ಮತ್ತು ಅದರ ಸಾಂಸ್ಕೃತಿಕ ಬದಲಾವಣೆಯಲ್ಲಿ ಪಾತ್ರವನ್ನು ವಿದ್ಯಾರ್ಥಿಗಳಿಗೆ ತಿಳಿಸಲಾಯಿತು.

'ಶಿಕ್ಷಣದ ಹೆಜ್ಜೆ' ಸಾಂಸ್ಕೃತಿಕ ಹಬ್ಬದಲ್ಲಿ ಪ್ರೊ. ಜಗದೀಶ ಶಿವನಗುತ್ತಿ ಅವರ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಭಾಗವಹಿಸಿದರು. 'ಜ್ಞಾನದಲ್ಲಿ ಬಲವಿದೆ' ಎಂಬ ಘೋಷಣೆ ಮೂಲಕ, ಶಿಕ್ಷಣದ ಮೌಲ್ಯಗಳನ್ನು ಸಾರಿದರು.

ಕಾರ್ಯಕ್ರಮದಲ್ಲಿ ಪ್ರೊ. ಗೌತಮ ರೇವಣಕರ, ಪ್ರೊ. ದಯಾನಂದ ಗೌಡರ, ಪ್ರೊ. ಲೋಕೇಶ, ಪ್ರೊ. ರಮೇಶ ಬಡಿಗೇರ, ಪ್ರೊ. ಆರ್. ವಿ. ಕಡಿ, ಪ್ರೊ. ಐ. ಎಸ್. ಪಾಟೀಲ, ಪ್ರೊ. ಅಶ್ವಿನಿ ಅರಳಿ, ಪ್ರೊ. ಶೈಲಜಾ ಮುದೇನಗುಡಿ, ಪ್ರೊ. ಲೋಹಿತ್, ಪ್ರೊ. ಪ್ರಸನ್ನ ನಾಡಗೌಡ, ಪ್ರೊ. ಸುನೀಲ ಪಾಟೀಲ, ಪ್ರೊ. ವೀರೇಶ ಮಾಗಳದ, ಪ್ರೊ. ವಿಜಯಕುಮಾರ ಮಾಲಗಿತ್ತಿ, ಪ್ರೊ. ಮಹಾಂತ ಕಟ್ಟಿಮನಿ, ಪ್ರೊ. ಬಸವರಾಜ ಪಾಟೀಲ ಮುಂತಾದವರಿದ್ದರು.

ಎಲೆಕ್ಟ್ರಿಕಲ್ ವಿಭಾಗದ ಮುಖ್ಯಸ್ಥರಾದ ಡಾ. ಈರಣ್ಣ ಕೋರಚಗಾಂವ ಮಾತನಾಡಿ, ಸಮಾಜದ ಪ್ರಗತಿಗೆ ಮತ್ತು ಭಿನ್ನ ಭಾಷೆಗಳು, ಸಂಸ್ಕೃತಿಗಳು ಹಾಗೂ ಸಾಂಸ್ಕೃತಿಕ ವೈವಿಧ್ಯತೆಯನ್ನು ಸೇರುವ ಸೇತುವೆಯಾಗಿರುವ ಶಿಕ್ಷಣದ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದರು.

ಕರ್ನಾಟಕ ಸರಕಾರ

## ಗ್ರಾಮ ಪಂಚಾಯತ ಕಾರ್ಯಾಲಯ, ಅಂತೂರ

ತಾಲೂಕ: ಗದಗ ಜಿಲ್ಲಾ: ಗದಗ

E-mail: antur.gad.gdg@gmail.com

ಕ್ರಮ ಸಂಖ್ಯೆ: ಗ್ರಾಪಂಅ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ:11-11-2024

### ದರಪಟ್ಟಿ ಪ್ರಕಟಣೆ

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಅಂತೂರ ಇವರು 2024-25ನೇ ಸಾಲಿನ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರ್ಮ್‌ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ. ಸಂ. | ಕಾಮಗಾರಿ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಅಂತೂರ ಬೆಂತೂರ ಗ್ರಾಮದ ಸ.ಹಿ.ಪ್ರಾ.ಶಾಲೆ ನಂ.1ರಲ್ಲಿ ಖೋಖೋ ಆಟದ ಮೈದಾನ ನಿರ್ಮಾಣ | 134587.00 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು. |
| 2 | ಅಂತೂರ ಗ್ರಾಮದ ಸ್ಮಶಾನದಲ್ಲಿ ಚಿತಾಗಾರ ನಿರ್ಮಾಣ | 310018.00 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು. |
| 3 | ಬೆಂತೂರ ಗ್ರಾಮದ ಸ್ಮಶಾನದಲ್ಲಿ ಚಿತಾಗಾರ ನಿರ್ಮಾಣ | 308897.00 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು. |
| 4 | ಅಂತೂರ ಬೆಂತೂರ ಗ್ರಾಮದ ಸ.ಹಿ.ಪ್ರಾ.ಶಾಲೆ ನಂ.1ರಲ್ಲಿ ಕಬಡ್ಡಿ ಆಟದ ಮೈದಾನ ನಿರ್ಮಾಣ | 133901.00 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು. |

ಅರ್ಹ ವೆಂಡರ್/ ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ವಿತರಿಸುವ ದಿನಾಂಕ 12-11-2024 ರಿಂದ 21-11-2024 ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ 21-11-2024 ಮುಂಜಾನೆ 10-00 ಘಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ 21-11-2024 ರ ಮಧ್ಯಾಹ್ನ 3.00 ಗಂಟೆ.

**ನಿಬಂಧನೆಗಳು**

1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ
2) ಪಂಚಾಯತ ಅಂತೂರದಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ/-
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತ ಅಂತೂರ**

ಸಹಿ/-
**ಅಧ್ಯಕ್ಷರು**
**ಗ್ರಾಮ ಪಂಚಾಯತ ಅಂತೂರ**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka